ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 294 ₹4, THURSDAY, 18 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವಕ್ಕೆ ಅದ್ಧೂರಿ ಚಾಲನೆ

ಸಂಗೊಳ್ಳಿ, ನಂದಗಡ ಸಮಗ್ರ ಅಭಿವೃದ್ಧಿಗೆ ಬದ್ಧ: ಸಿಎಂ ಸಿದ್ದರಾಮಯ್ಯ ಭರವಸೆ

ಬೆಳಗಾವಿ: ಕ್ರಾಂತಿವೀರ ರಾಯಣ್ಣನ ಹುಟ್ಟೂರು ಸಂಗೊಳ್ಳಿ ಮತ್ತು ನೇಣುಗಂಬಕ್ಕೇರಿದ ಖಾನಾಪುರ ತಾಲ್ಲೂಕಿನ ನಂದಗಡದ ಸಮಗ್ರಅಭಿವೃದ್ಧಿಗೆ ಸರಕಾರ ಬದ್ಧವಿದ್ದು, ಮುಂಬರುವ ದಿನಗಳಲ್ಲಿ ಜೆಜ್ಜೆನ ಅನುದಾನ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಬೆಳಗಾವಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇಲಾಖೆಯ ಆಶ್ರಯದಲ್ಲಿ ಬೈಲಹೊಂಗಲ್ ತಾಲ್ಲೂಕಿನ ಸಂಗೊಳ್ಳಿ ಗ್ರಾಮದಲ್ಲಿ ಬುಧವಾರ ಏರ್ಪಡಿಸಲಾಗಿದ್ದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಯಣ್ಣನ ಹುಟ್ಟೂರು ಸಂಗೊಳ್ಳಿ ಹಾಗೂ ನೇಣುಗಂಬಕ್ಕೆ ಏರಿಸಿದ ನಂದಗಡ ಅಭಿವೃದ್ಧಿಗೆ 2016–17 ನೇ ಸಾಲಿನಲ್ಲಿ ಪ್ರಾಧಿಕಾರ ರಚಿಸಲಾಗಿದೆ.

ರಾಯಣ್ಣನ ಹೆಸರು ಚಿರಸ್ಥಾಯಿಯಾಗಿಸಲು ಸಂಗೊಳ್ಳಿ ಮತ್ತು ನಂದಗಡ ಅಭಿವೃದ್ಧಿಗೆ ರಚಿಸಲಾದ

ಪ್ರಾಧಿಕಾರಕ್ಕೆ ನೂರು ಎಕರೆ ಜಮೀನು ನೀಡಲಾಯಿತು.

ಅಪ್ಪಟ ದೇಶಭಕ್ತ ರಾಯಣ್ಣ ಯುವಕರಿಗೆ ಸ್ಫೂರ್ತಿಯಾಗಬೇಕು ಎಂಬ ಕಾರಣಕ್ಕ 267 ಕೋಟಿ ವೆಚ್ಚದಲ್ಲಿ ಸೈನಿಕ ಶಾಲೆ, ಶಿಲ್ಪವನ ನಿರ್ಮಿಸಲಾಗಿದೆ.

ಬಾಲಕಿಯರು ಸೇರಿದಂತೆ 230 ವಿದ್ಯಾರ್ಥಿಗಳು ಸೈನಿಕ ಶಾಲೆಯಲ್ಲಿ ಕಲಿಯುತ್ತಿದ್ದಾರೆ. ದೇಶಪ್ರೇಮ ಬೆಳೆಸಲು ಶಾಲೆ ಪ್ರೇರಣೆಯಾಗಿದೆ.

ಸಂಗೊಳ್ಳಿ ರಾಯಣ್ಣನಲ್ಲಿದ್ದ ತಾಯ್ನಾಡಿನ ಪ್ರೇಮವನ್ನು ನಾವೆಲ್ಲರೂ ರೂಢಿಸಿಕೊಳ್ಳಬೇಕು.

ಮೊಗಲರು ಹಾಗೂ ಬ್ರಿಟಿಷರು ಸ್ವಂತ ಸಾಮರ್ಥ್ಯದಿಂದ ಭಾರತವನ್ನು ಆಳಲಿಲ್ಲ; ನಮ್ಮ ನಮ್ಮಲ್ಲಿ ಒಡಕು ಮೂಡಿಸಿ ನಮ್ಮನ್ನು ಆಳುವಲ್ಲಿ ಯಶಸ್ವಿಯಾದರು.

ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟಿರುವುದು ಮಹಾತ್ಮಾಗಾಂಧೀಜಿ ನೇತೃತ್ವದ ಕಾಂಗ್ರೆಸ್ ಎಂಬುದನ್ನು ಮರೆಯುವಂತಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು. ಹಲಗಲಿ ಬೇಡರು, ಟಿಪ್ಪು ಸುಲ್ತಾನ್ ಹೋರಾಟ ಸ್ಮರಣೀಯ: ಸುರಪುರದ ವೆಂಕಟಪ್ಪನಾಯಕ, ಹಲಗಲಿ ಬೇಡರು, ಟಿಪ್ಪು ಸುಲ್ತಾನ್, ಕಿತ್ತೂರು ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ ಹೀಗೆ ಅನೇಕ ಜನರು ಬ್ರಿಟೀಷರ ವಿರುದ್ಧ ಹೋರಾಡಿದವರು. ಇವರ ದೇಶಪ್ರೇಮ ಸ್ಮರಣೀಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಇತಿಹಾಸ ಮರೆತವರು ಇತಿಹಾಸ ಸೃಷ್ಟಿಸಲಾರರು ಎಂದು ಡಾ.ಅಂಬೇಡ್ಕರ್ ಹೇಳಿದ್ದಾರೆ. ಆದ್ದರಿಂದ ಇಂತಹ ಮಹನೀಯರ ಹೋರಾಟದ ಬದುಕು, ಚರಿತ್ರೆಯನ್ನು ಜನರಿಗೆ ತಿಳಿಸುವ ಕೆಲಸ ಮಾಡಬೇಕಿದೆ ಎಂದು ಪ್ರತಿಪಾದಿಸಿದರು.

ನಾವು ಇತಿಹಾಸವನ್ನು ತಿಳಿದುಕೊಳ್ಳದಿದ್ದರೆ ರಾಜಾ ವೆಂಕಟಪ್ಪ ನಾಯಕರು, ಸಂಗೊಳ್ಳಿ ರಾಯಣ್ಣ, ಚೆನ್ನಮ್ಮನಂತಹ ಮಹನೀಯರು ಜನಮಾನಸದಿಂದ ಮರೆಯಾಗಿಬಿಡುತ್ತಾರೆ. ಆದ್ದರಿಂದ ಅವರ ಹೆಸರು ಚಿರಸ್ಥಾಯಿಯಾಗಿಸುವ ಕೆಲಸವನ್ನು ಸರಕಾರ ಮಾಡಬೇಕಾಗಿದೆ ಎಂದು ಮುಖ್ಯಮಂತ್ರಿಗಳು ಹೇಳಿದರು.

2ನೇ ಪುಟಕ್ಕೆ

ರಾಜ್ಯದಲ್ಲಿ ಕೊರೋನಾ ಇಳಿಮುಖ

87 ಮಂದಿಗೆ ಪಾಸಿಟಿವ್, ಒಂದು ಸಾವು

ಬೆಂಗಳೂರು: ರಾಜ್ಯದಲ್ಲಿ ಕೋವಿಡ್–19 ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಇಳಿಯಾಗುತ್ತಿದ್ದು, ಬುಧವಾರ 87 ಮಂದಿಗೆ ಕೊರೋನಾ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ರಾಜ್ಯದಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ 672ಕ್ಕೆ ಇಳಿಕೆಯಾಗಿದೆ.

ಕಳೆದ 24 ಗಂಟೆಗಳಲ್ಲಿ ಬೆಂಗಳೂರಿನಲ್ಲಿ 38 ಪಾಸಿಟಿವ್ ಪ್ರಕರಣ ಸೇರಿದಂತೆ ರಾಜ್ಯದಲ್ಲಿ 87 ಮಂದಿಗೆ ಕೋವಿಡ್–19 ಪಾಸಿಟಿವ್ ದೃಢಪಟ್ಟಿದೆ. ಸೋಂಕಿನಿಂದ ಇಂದು ಒಬ್ಬರು ಮೃತಪಟ್ಟಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಕೋವಿಡ್ ನಿಂದ 165 ಮಂದಿ ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಕಳೆದ 24 ಗಂಟೆಗಳಲ್ಲಿ 7,589 ಮಂದಿಗೆ ಕೊರೋನಾ ಟೆಸ್ಟ್ ಮಾಡಲಾಗಿದೆ. ಪಾಸಿಟಿವಿಟಿ ದರ ಶೇ. 1.14ರಷ್ಟಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ನೀಡಿದೆ.

ಸೋಂಕಿತರಲ್ಲಿ 672 ಮಂದಿ ಮನೆ ಆರೈಕೆಗೆ ಒಳಗಾದರೆ, 24 ಮಂದಿಗೆ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. 3 ಸೋಂಕಿತರು ತೀವ್ರ ನಿಗಾ ಘಟಕದಲ್ಲಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಲಂಚ ಸ್ವೀಕರಿಸುವಾಗ ಸಿಕ್ಕಿಬಿದ್ದ ಆಹಾರ ಇಲಾಖೆ ನಿರೀಕ್ಷಕ

ಬಾಗಲಕೋಟೆ: ಆಹಾರ ಇಲಾಖೆ ನಿರೀಕ್ಷಕ ಮತ್ತು ಸಿಬ್ಬಂದಿ ಲೋಕಾಯುಕ್ತ ಬಲೆಗೆ ಬಿದ್ದ ಪ್ರಕರಣ ಬೆಳಕಿಗೆ ಬಂದಿದೆ. 60 ಸಾವಿರ ಲಂಚ ಸ್ವೀಕರಿಸುವಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ.

ಬಾಗಲಕೋಟೆ ತಹಶೀಲ್ದಾರ್ ಕಚೇರಿಗೆ ದಾಳಿ ನಡೆಸಿದ ಲೋಕಾಯುಕ್ತರು ಆಹಾರ ವಿಭಾಗದ ನಿರೀಕ್ಷಕ ಈರಯ್ಯ ಕೋಟಿ, ಸಿಬ್ಬಂದಿ ಮಲ್ಲಿಕಾರ್ಜುನ ಹಾವರಗಿ ಅವರನ್ನು ಹಿಡಿದಿದ್ದಾರೆ. ಅಮಾನತುಗೊಂಡ ಪಡಿತರ ಅಂಗಡಿ ಪರವಾನಗಿ ಮುಂದುವರಿಕೆಗೆ ಲಂಚ ಪಡೆಯುವ ವೇಳೆ ದಾಳಿ ಮಾಡಿದ ಅಧಿಕಾರಿಗಳು ಇಬ್ಬರನ್ನು ಬಂಧಿಸಿದ್ದಾರೆ.

ಸುರೇಂದ್ರ ಗಡಗಡೆ ಎಂಬುವರು ಲೋಕಾಯುಕ್ತರಿಗೆ ನೀಡಿದ ದೂರಿನ ಅನ್ವಯ ಡಿವೈಎಸ್ಪಿ ಪುಷ್ಪಲತಾ ಎನ್. ನೇತೃತ್ವದಲ್ಲಿ ಈ ದಾಳಿ ನಡೆದಿದೆ. ದಾಳಿ ವೇಳೆ ಆಹಾರ ಇಲಾಖೆ ನಿರೀಕ್ಷಕ ಮತ್ತು ಸಿಬ್ಬಂದಿ ಸಿಕ್ಕಿಬಿದ್ದಿದ್ದಾರೆ.



ಅಯೋಧ್ಯೆಗೆ ಪಟಾಕಿ ಸಾಗಿಸುತ್ತಿದ್ದ ಟ್ರಕ್ ಅಗ್ನಿಗಾಹುತಿ

ಉತ್ತರಪ್ರದೇಶ: ಅಯೋಧ್ಯೆಗೆ ಪಟಾಕಿ ಹೊತ್ತೊಯ್ಯುತ್ತಿದ್ದ ಟ್ರಕ್ ಅಗ್ನಿಗೆ ಆಹುತಿಯಾದ ಘಟನೆ ಉತ್ತರ ಪ್ರದೇಶದ ಪೂರ್ವ ಕೊಟ್ವಾಲಿಯ ಖರ್ಗಿ ಖೇಡಾ ಗ್ರಾಮದ ಬಳಿ ನಡೆದಿದೆ.

ಇದೇ ಜನವರಿ 22ರಂದು ಅಯೋಧ್ಯೆಯ ರಾಮಮಂದಿರದಲ್ಲಿ ರಾಮಲಲ್ಲಾ ಪ್ರಾಣಪ್ರತಿಷ್ಠಾಪನೆ ನೆರವೇರಲಿದೆ. ಈ ಹಿನ್ನೆಲೆಯಲ್ಲಿ ಅಯೋಧ್ಯೆಗೆ ಪಟಾಕಿ ಹೊತ್ತೊಯ್ಯುತ್ತಿದ್ದ ಟ್ರಕ್ ಅಗ್ನಿಗೆ ಆಹುತಿಯಾದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಸ್ಥಳೀಯರು ಇದನ್ನು ವೀಡಿಯೋ ಮಾಡಿ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಶ್ರೀರಾಮ ಪ್ರಾಣಪ್ರತಿಷ್ಠೆ ಹಿನ್ನೆಲೆಯಲ್ಲಿ ಸಂಭ್ರಮವನ್ನು ಕೊಂಡಾಡಲು ಟ್ರಕ್‌ವೊಂದರಲ್ಲಿ ಪಟಾಕಿ ಹೊತ್ತೊಯ್ಯಲಾಗುತ್ತಿತ್ತು. ಈ ವೇಳೆ ಇದ್ದಕ್ಕಿದ್ದಂತೆ ಟ್ರಕ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಬೆಂಕಿ ಕಿಡಿ ಕ್ಷಣಾರ್ಧದಲ್ಲಿ ವ್ಯಾಪಿಸಿ ಪಟಾಕಿಗೆ ಹೊತ್ತಿಕೊಂಡಿದೆ. ಇದರಿಂದ ಬೆಂಕಿ ತೀವ್ರತೆ ಹರಡುವ ತೀವ್ರತೆ ಹೆಚ್ಚಾಗಿ, ಟ್ರಕ್ ಸಂಪೂರ್ಣ ಭಸ್ಮವಾಗಿದೆ. ಈ ಘಟನೆಯನ್ನು ಸ್ಥಳೀಯರು ವೀಡಿಯೋ ಮಾಡಿದ್ದು ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಶ್ರೀರಾಮನ ಫ್ಲೆಕ್ಸ್ ಹರಿದ ಕಿಡಿಗೇಡಿಗಳು: ಇಬ್ಬರು ಬಂಧನ

ಕೋಲಾರ: ಅಯೋಧ್ಯೆಯಲ್ಲಿನ ರಾಮಮಂದಿರ ಲೋಕಾರ್ಪಣೆ ಪ್ರಯುಕ್ತ ಮುಳಬಾಗಿಲಿನಲ್ಲಿ ಶ್ರೀರಾಮನ ಫ್ಲೆಕ್ಸ್ ಗಳನ್ನು ಅಳವಡಿಸಲಾಗಿತ್ತು. ಆದರೆ ಇದನ್ನು ಕೆಲ ಕಿಡಿಗೇಡಿಗಳು ಬ್ಲೇಡ್ ನಿಂದ ಕುಯ್ದಿದ್ದು ಈ ಸಂಬಂಧ ಇಬ್ಬರನ್ನು ಬಂಧಿಸಲಾಗಿದೆ.

ಶ್ರೀರಾಮನ ಫ್ಲೆಕ್ಸ್ ಹರಿದಿರುವುದಕ್ಕೆ ಬಿಜೆಪಿ ತೀವ್ರ ಆಕ್ರೋಶ ವ್ಯಕ್ತಪಡಿಸಿತ್ತು. ಈ ಸಂಬಂಧ ಮುಳಬಾಗಿಲು ಪೊಲೀಸರು ಸಿಸಿ ಟಿವಿ ಕ್ಯಾಮೆರಾ ದೃಶ್ಯಾವಳಿಗಳನ್ನು ಪರಿಶೀಲಿಸಿ ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ.

ಸದ್ಯ ಪೊಲೀಸರು ಬಂಧಿತ ವ್ಯಕ್ತಿಗಳ ಹೆಸರನ್ನು ಇನ್ನೂ ಬಹಿರಂಗಪಡಿಸಿಲ್ಲ. ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸರನ್ನು ನಿಯೋಜಿಸಲಾಗಿದೆ.

ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲೇ ಲೋಕಸಭೆ ಚುನಾವಣೆ, ಯಾವುದೇ ಅನುಮಾನ ಬೇಡ: ಡಿಸಿಎಂ ಡಿಕೆಶಿ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲೇ ಲೋಕಸಭೆ ಚುನಾವಣೆಯನ್ನು ಎದುರಿಸುತ್ತೇವೆ. ಈ ಬಗ್ಗೆ ಯಾವುದೇ ಅನುಮಾನ ಬೇಡ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಬುಧವಾರ ಹೇಳಿದ್ದಾರೆ.

ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅತಿ ಹೆಚ್ಚು ಸ್ಥಾನ ಗಳಿಸಿದರೆ ಸಿದ್ದರಾಮಯ್ಯ ಅವರೇ ಪೂರ್ಣಾವಧಿ ಮುಖ್ಯಮಂತ್ರಿಯಾಗಿ ಮುಂದುವರಿಯಲಿದ್ದಾರೆ ಎಂದು ಸಿಎಂ ಪುತ್ರ ಯತೀಂದ್ರ ಅವರು ಹೇಳಿದ್ದು, ಈ ಹೇಳಿಕೆ ಕಾಂಗ್ರೆಸ್‌ನಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿದೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್ ಅವರು, ಅವರ(ಸಿದ್ದರಾಮಯ್ಯ) ನಾಯಕತ್ವದಲ್ಲೇ ಚುನಾವಣೆ ನಡೆಯುತ್ತೆ. ಅದರಲ್ಲಿ ಅನುಮಾನ ಬೇಡ ಎಂದರು.

ನಮ್ಮ ಸರ್ಕಾರ ಬಲಿಷ್ಠವಾಗಿದೆ. ಅದನ್ನು ಅಲುಗಾಡಿಸಲು ಯಾರಿಂದಲೂ ಸಾಧ್ಯವಿಲ್ಲ. ಸಿದ್ದರಾಮಯ್ಯ ನಮ್ಮ ರಾಜ್ಯದ ಮುಖ್ಯಮಂತ್ರಿ. ನಾನು ಕೆಪಿಸಿಸಿ ಅಧ್ಯಕ್ಷನಾಗಿದ್ದೇನೆ. ನಾವಿಬ್ಬರು ಸೇರಿ ಒಟ್ಟಿಗೆ ಚುನಾವಣೆ ಮಾಡುತ್ತೇವೆ. ಆದ್ರೆ, ಅವರ ನಾಯಕತ್ವದಲ್ಲೇ ಚುನಾವಣೆ ನಡೆಯುತ್ತೆ. ಅದರಲ್ಲಿ ಯಾವುದೇ ಅನುಮಾನ ಬೇಡ ಎಂದು ಸ್ಪಷ್ಟಪಡಿಸಿದರು.

ಸಿದ್ದರಾಮಯ್ಯ 5 ವರ್ಷ ಸಿಎಂ ಹೇಳಿಕೆ ಪ್ರತಿಕ್ರಿಯಿಸಿದ ಡಿಕೆಶಿ, ಆಸೆ ಪಡುವುದು, ಹೇಳೋದು, ಜನರಿಗೆ ಮನವಿ ಮಾಡುವುದು ಸಾಮಾನ್ಯ. ನಾನು ನನ್ನೂರಿಗೆ ಹೋದಾಗ ನನಗೆ ಶಕ್ತಿ ಕೊಡಿ ಎಂದು ಕೇಳುತ್ತೇನೆ. ಅದು ಸ್ವಾಭಾವಿಕ, ಬೇರೆ ರೀತಿ ಯಾಕೆ ಟ್ವಿಸ್ಟ್ ಮಾಡಬೇಕು. ಯತೀಂದ್ರ ಸೂಕ್ಷ್ಮ ವ್ಯಕ್ತಿ, ಉದ್ಭವ ಆಗುತ್ತಿರುವ ನಾಯಕ. ನಾವು ಅವರಿಗೆ ಸಹಕಾರ ಕೊಡೋಣ. ಬಿಜೆಪಿಯವರು ಅವರ ಪಕ್ಷವನ್ನ ಸರಿ ಮಾಡಿಕೊಳ್ಳಲಿ ಎಂದು ತಿರುಗೇಟು ನೀಡಿದರು.

5 ವರ್ಷ ಸಿದ್ದರಾಮಯ್ಯ ಸಿಎಂ ಆಗಿರುತ್ತಾರೆ : ಡಾ. ಯತೀಂದ್ರ ಹೇಳಿಕೆ

ಹಾಸನ: ಮುಂದಿನ ಐದು ವರ್ಷಗಳ ಕಾಲ, ಇದೇ ಗ್ಯಾರಂಟಿ ಸ್ಕೀಮ್ಗಳನ್ನು ಮುಂದುವರಿಸಿ ಅವರು ಮುಖ್ಯಮಂತ್ರಿಯಾಗಿ ಯಾವುದೇ ಅಡೆ–ತಡೆ ಇಲ್ಲದೇ ಮುಂದುವರಿಯಲು ಸಾಧ್ಯವಾಗುತ್ತದೆ. ಅದಕ್ಕೆ ನಿಮ್ಮ ಬೆಂಬಲ ಮತ್ತು ಆಶೀರ್ವಾದ ಇರಲಿ ಎಂದು ಡಾ.ಯತೀಂದ್ರ ಸಿದ್ದರಾಮಯ್ಯ ಮನವಿ ಮಾಡಿಕೊಂಡಿದ್ದಾರೆ. ಸಂಗೊಳ್ಳಿ ರಾಯಣ್ಣ ಪ್ರತಿಮೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸಿದ್ದರಾಮಯ್ಯರವರ ನೇತೃತ್ವದಲ್ಲಿ ಲೋಕಸಭಾ ಚುನಾವಣೆ ನಡೆಯುತ್ತದೆ. ಹೆಚ್ಚು ಸ್ಥಾನ ಗೆದ್ದರೆ ಯಾವುದೇ ಅಡೆತಡೆ ಇಲ್ಲದೆ ಐದು ವರ್ಷ ಸಿಎಂ ಆಗಿರುತ್ತಾರೆ. ಸರ್ಕಾರಕ್ಕೆ ಒಂದು ವರ್ಷ ತುಂಬುವ ಮೊದಲೇ ಸಿದ್ದರಾಮಯ್ಯ ಅವರು ಐದು ಗ್ಯಾರಂಟಿ ಜಾರಿ ಮಾಡಿದ್ದಾರೆ. ಮತ್ತೊಮ್ಮೆ ನುಡಿದಂತೆ ನಡೆಯುವುದಾಗಿ ಸಾಬೀತು ಮಾಡಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನಗಳನ್ನು ಗೆದ್ದರೆ ನೈತಿಕವಾಗಿ ಅವರಿಗೆ ಮತ್ತಷ್ಟು ಬೆಂಬಲ ಸಿಗುತ್ತದೆ ಎಂದಿದ್ದಾರೆ. ಗ್ಯಾರೆಂಟಿ ಯೋಜನೆಗೆ ವರ್ಷಕ್ಕೆ 56 ಸಾವಿರ ಕೋಟಿ ಖರ್ಚು ಮಾಡಲಾಗುತ್ತಿದೆ. ಇಷ್ಟೊಂದು ಹಣ ಖರ್ಚು ಮಾಡುತ್ತಿರುವಾಗ ಜನರ ಬೆಂಬಲ ಬೇಕು. ಅವರು ಮುಖ್ಯಮಂತ್ರಿಯಾಗಿ ಯಾವುದೇ ಅಡೆತಡೆ ಇಲ್ಲದೆ ಮುಂದುವರೆಯಲು ಸಾಧ್ಯವಾಗುತ್ತದೆ. ಹಾಗಾಗಿ ನಿಮ್ಮ ಬೆಂಬಲ ಆಶೀರ್ವಾದ ಅವರ ಮೇಲೆ ಇರಲಿ ಎಂದು ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ. ಈ ನಡುವೆ ಮುಂದಿನ ಪ್ರದಾನಿ ಸಿದ್ದರಾಮಯ್ಯ ಎಂದು ಅಭಿಮಾನಿಗಳು ಘೋಷಣೆ ಕೂಗಿದ್ದಾರೆ. ನೀವು ಸಿದ್ದರಾಮಯ್ಯ ಅವರನ್ನು ಬೆಂಬಲಿಸಿದ್ದರಿಂದ ಅವರು ಎರಡನೇ ಬಾರಿ ಸಿಎಂ ಆದರು ಎಂದರು.

ಸಿಎಂ ಬದಲಾವಣೆ ಮಾಡೋದು ಹೈಕಮಾಂಡ್‌ಗೆ ಬಿಟ್ಟ ವಿಚಾರ: ಜಿ. ಪರಮೇಶ್ವರ್

ಬೆಂಗಳೂರು: ಸಿಎಂ ಬದಲಾವಣೆ ಮಾಡೋದು, ಮುಂದುವರೆಸೋದು ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಹೆಚ್ಚು ಸ್ಥಾನ ಗೆದ್ದರೆ 5 ವರ್ಷ ಸಿದ್ದರಾಮಯ್ಯ ಸಿಎಂ ಆಗಿ ಇರುತ್ತಾರೆ ಎಂಬ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಲೋಕಸಭೆಯಲ್ಲಿ ಸಿದ್ದರಾಮಯ್ಯ ಒಬ್ಬರೇ ಅಲ್ಲ. ಕೆಪಿಸಿಸಿ ಅಧ್ಯಕ್ಷರು, ನಾವೆಲ್ಲರೂ ಇದ್ದೇವೆ. ನಾವೆಲ್ಲ ಸೇರಿ 28 ಕ್ಷೇತ್ರ ಗೆಲ್ಲಬೇಕು ಅಂತ ಪ್ರಯತ್ನ ಮಾಡ್ತೀವಿ. ಅಂತಿಮವಾಗಿ ಜನ ಹೇಗೆ ಸಹಕಾರ ಕೊಡ್ತಾರೆ, ಮತ ಹಾಕ್ತಾರೆ ಅನ್ನೋದು ಜನರಿಗೆ ಬಿಟ್ಟಿದ್ದು ಎಂದು ಹೇಳಿದ್ದಾರೆ.

ನಮಗೆ ವಿಶ್ವಾಸ ಇದೆ. ನಾವು ಕಾರ್ಯಕ್ರಮ ಕೊಟ್ಟಿದ್ದೇವೆ. ಗ್ಯಾರಂಟಿ ಅನುಷ್ಠಾನ ಮಾಡಿದ್ದೇವೆ. ಜನ ಸಮುದಾಯಕ್ಕೆ ಈ ಸರ್ಕಾರದ ಬಗ್ಗೆ ಒಳ್ಳೆಯ ಅಭಿಪ್ರಾಯ ಇದೆ. ಹಾಗಾಗಿ ನಾವು ಹೆಚ್ಚು ಸ್ಥಾನ ಗೆಲ್ಲಬೇಕು ಅಂತ ಹೇಳಿ ನಾವೆಲ್ಲ ಸಂಕಲ್ಪ ಮಾಡಿದ್ದೇವೆ. ಹೈಕಮಾಂಡ್ ಕೂಡಾ ನಮಗೆ ಇದನ್ನೇ ಹೇಳಿದೆ ಎಂದರು.

ಕ್ಷೇತ್ರ ಗೆದ್ದುಕೊಂಡು ಬರಬೇಕು!: ಸಿಎಂ ಮುಂದುವರಿಸೋದು, ಬಿಡೋದು ಹೈಕಮಾಂಡ್‌ಗೆ ಬಿಟ್ಟ ವಿಚಾರ. ಆ ತೀರ್ಮಾನ ನಮ್ಮ ಹಂತದಲ್ಲಿ ಆಗೋದಿಲ್ಲ. ಅದನ್ನ ಹೈಕಮಾಂಡ್ ನವರು ತೀರ್ಮಾನ ಮಾಡ್ತಾರೆ ಎಂದರು. ಲೋಕಸಭೆ ಚುನಾವಣೆಗಾಗಿ 28 ಸಚಿವರ ಸಭೆಯನ್ನ ದೆಹಲಿಯಲ್ಲಿ ಮಾಡಿದ್ರು. ಒಂದೊಂದು ಕ್ಷೇತ್ರದ ಜವಾಬ್ದಾರಿ ಕೊಟ್ಟಿದ್ದಾರೆ. ನಾವು ಆ ಕ್ಷೇತ್ರ ಗೆದ್ದುಕೊಂಡು ಬರಬೇಕು ಎಂದರು.

ಮೃತ ಅಭಿಮಾನಿಗಳ ಕುಟುಂಬಕ್ಕೆ ತಲಾ 5 ಲಕ್ಷ ರೂ. ಪರಿಹಾರ ತಲುಪಿಸಿದ ರಾಕಿ ಬಾಯ್

ಬೆಂಗಳೂರು: ನಟ ಯಶ್ ಅವರ ಜನ್ಮದಿನದ ಹಿನ್ನಲೆಯಲ್ಲಿ ಬ್ಯಾನರ್ ಕಟ್ಟುವಾಗ ವಿದ್ಯುತ್ ತಂತಿ ಸ್ಪರ್ಶಿಸಿ ಅಭಿಮಾನಿಗಳು ನಿಧನರಾದ ನೋವು ಇನ್ನೂ ಹಸಿಯಾಗಿದೆ. ಮೃತ ಅಭಿಮಾನಿಗಳಾದ ಮುರಳಿ, ನವೀನ್ ಮತ್ತು ಹನುಮಂತ ಅವರ ಕುಟುಂಬದವರಿಗೆ ಪರಿಹಾರ ಹಣ ತಲುಪಿಸಲಾಗಿದೆ.

ಯಶ್ ಆಪ್ತರು ಗದಗ ಜಿಲ್ಲೆಯ ಸೊರಣಗಿ ಗ್ರಾಮಕ್ಕೆ ತೆರಳಿ ಪರಿಹಾರದ ಚೆಕ್ ನೀಡಿದ್ದಾರೆ. ಪ್ರತಿ ಕುಟುಂಬಕ್ಕೆ ತಲಾ ಐದು ಲಕ್ಷ ರೂಪಾಯಿ ಚೆಕ್ ನೀಡಲಾಗಿದೆ. ಯಶ್ ಸ್ನೇಹಿತರು ಬಂದು ಪರಿಹಾರ ಹಣ ನ

ಜನವರಿ 19 ರಂದುವಿದ್ಯಾರ್ಥಿ–ವಿಜ್ಞಾನಿ ನೇರ ಸಂವಾದಕಾರ್ಯಕ್ರಮ

ಬೆಳಗಾವಿ: ರಾಜ್ಯ ವಿಜ್ಞಾನಪರಿಷತ್ತು, ಶಾಲಾ ಶಿಕ್ಷಣ ಇಲಾಖೆ, ಶ್ರೀ ಸಿದ್ಧರಾಮೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ಡಾ. ಸ. ಜ. ನಾಗಲೋಟಿಮಠ ವಿಜ್ಞಾನಕೇಂದ್ರ ಇವರ ಸಹಯೋಗದೊಂದಿಗೆ ಬೆಳಗಾವಿ ನಗರ ಹಾಗೂ ಗ್ರಾಮೀಣ ಪ್ರದೇಶದ 10ನೇ ವರ್ಗದ ವಿದ್ಯಾರ್ಥಿಗಳಿಗಾಗಿ ಲಿಖಿತ ರಸಪ್ರಶ್ನೆ ಸ್ಪರ್ಧೆಹಾಗೂ ವಿದ್ಯಾರ್ಥಿ–ವಿಜ್ಞಾನಿ ನೇರ ಸಂವಾದ ಕಾರ್ಯ ಕ್ರಮವನ ಜನವರಿ 19ರಂದುಬೆಳಿಗ್ಗೆ 10.00 ಗಂಟೆಗೆಶ್ರೀ ಸಿದ್ಧರಾಮೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯ, ಶಿವಬಸವ ನಗರ ಬೆಳಗಾವಿ ಇಲಿ ಆಯೋಜಿಸಲಾಗಿದೆ ಎಂದು ನಾಗನೂರು ರುದ್ರಾಕ್ಷಿ ಮಠದಡಾ. ಅಲ್ಲಮಪ್ರಭು ಮಹಾಸ್ವಾಮಿಜಿ ತಿಳಿಸಿದ್ದಾರೆ.

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ISRO) ವಿಜ್ಞಾನಿಗಳಾದ ಎಸ್. ಹಿರಿಯಣ್ಣ ಹಾಗೂ ಎನ್. ಎಸ್. ಕುಮಾರ್ ಅವರು ಈ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಅದಲ್ಲದೇ ಕಾರ್ಯಕ್ರಮದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಲಿಖಿತರಸಪ್ರಶ್ನೆ ಸ್ಪರ್ಧೆ ಆಯೋಜಿಸಿದ್ದು, ವಿಜೇತರಿಗೆ ಸೂಕ್ತ ಬಹುಮಾನ ಹಾಗೂ ಭಾಗವಹಿಸಿದ ಎಲ್ಲರಿಗೂ ಅಭಿನಂದನಾ ಪತ್ರ ನೀಡಲಾಗುವುದುಎಂದು ಸ್ವಾಮಿಜಿ ತಿಳಿಸಿದ್ದಾರೆ.

ಬೆಳಗಾವಿ ನಗರ ಹಾಗೂ ಗ್ರಾಮೀಣ ಪ್ರದೇಶ ವ್ಯಾಪ್ತಿಯಪ್ರತೀ ಶಾಲೆಯಿಂದ 10 ವಿದ್ಯಾರ್ಥಿಗಳಿಗೆ ಅವರಮಾರ್ಗದರ್ಶಿ ಶಿಕ್ಷಕರೊಂದಿಗೆ ಭಾಗವಹಿಸಲು ಅವಕಾಶವಿದ್ದು, ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಕಾಲೇಜಿನ ಪ್ರಾಚಾರ್ಯರಾದ ಸ್ವಪ್ನಾಜೋಷಿ ಮೊ : 8618947275 ಅವರನ್ನು ಸಂಪರ್ಕಿಸಬಹುದಾಗಿದೆ.

ಕೃವಿವಿ: ತಾತ್ಕಾಲಿಕ ಹುದ್ದೆಗಳಿಗೆ ಅರ್ಜಿ ಆಹ್ವಾನ

ಧಾರವಾಡ: ಕೃಷಿವಿಶ್ವವಿದ್ಯಾಲಯದ ಕೃಷಿ ಅರಣ್ಯ ವಿಭಾಗದಲ್ಲಿ ಜೈವಿಕ ಇಂಧನ ಉದ್ಯಾನವನ ಯೋಜನೆಯಡಿ ಖಾಲಿ ಇರುವ ವೈಜ್ಞಾನಿಕ ಸಹಾಯಕ, ಕ್ಷೇತ್ರ ಸಹಾಯಕ ಮತ್ತು ಸಹಾಯಕ ಈ ಮೂರು ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಫೀಲ್ಡ್ ಇನವೆಸ್ಟಿಗೆಟರ್ (ಕ್ಷೇತ್ರ ಸಹಾಯಕ), ಹೆಲ್ಪರ್(ಸಹಾಯಕ) ಹುದ್ದೆಗಳಿಗೆ ಜನವರಿ 20 ರಂದು ಪ್ರಾಯೋಗಿಕ ಪರೀಕ್ಷೆ ಮತ್ತು ಸಂದರ್ಶನವನ್ನು ಸಂಶೋಧನಾ ನಿರ್ದೇಶಕರ ಕಾರ್ಯಲಯದಲ್ಲಿ ಆಯೋಜಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯದ ಅಂತರರ್ಜಾಲ **www.uasd.in** ಗೆ ಸಂಪರ್ಕಿಸಬಹುದು ಎಂದು ಕೃಷಿ ಅರಣ್ಯ ವಿಭಾಗದ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಗೃಹರಕ್ಷಕದಳದ ಗೌರವ ಸಮಾದೇಷ್ಟರ ಹುದ್ದೆ ಭರ್ತಿ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗೃಹರಕ್ಷಕದಳದ ಗೌರವ ಸಮಾದೇಷ್ಟರ ಹುದ್ದೆ ಖಾಲಿ ಇದ್ದು, ತುರ್ತಾಗಿ ಸರ್ಕಾರದ ಮಟ್ಟದಲ್ಲಿ ಆಯ್ಕೆಮಾಡಿ, ಅರ್ಹತೆ ಆಧಾರದ ಮೇಲೆ ಭರ್ತಿ ಮಾಡಬೇಕಾಗಿರುವುದರಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಮಾದೇಷ್ಟರ ನೇಮಕಾತಿಗಾಗಿ ಹೊಸದಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಜಿಲ್ಲಾ ಸಮಾದೇಷ್ಟರ ಹುದ್ದೆಯನ್ನು ಕರ್ನಾಟಕ ಗೃಹರಕ್ಷಕ ನಿಯಮಗಳು, 1963 ರ ನಿಯಮ 3–ಬಿ ಅನ್ವಯ ನಿಯಮಾನುಸಾರ ಭರ್ತಿ ಮಾಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಮೂನೆಯನ್ನು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪಡೆದುಕೊಳ್ಳಬಹುದಾಗಿದೆ.

ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಜನವರಿ 30, 2024ರ ಒಳಗಾಗಿ "ಜಿಲ್ಲಾಧಿಕಾರಿಗಳು, ಬೆಳಗಾವಿ" ಇವರಿಗೆ ಸಲ್ಲಿಸಬೇಕು ಎಂದು ಆರಕ್ಷಕ ಮಹಾ ನಿರ್ದೇಶಕರು, ಗೃಹರಕ್ಷಕದಳದ ಮಹಾ ಸಮಾದೇಷ್ಟರು ಮತ್ತು ಪೌರರಕ್ಷಣೆ ನಿರ್ದೇಶಕರಾದ ಅಕ್ಷಯ ಎಂ. ಹಾಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುಖ್ಯಮಂತ್ರಿ ಅಲ್ಪಾವಧಿ ಕೌಶಲ್ಯ ತರಬೇತಿ: ಅರ್ಜಿ ಆಹ್ವಾನ

ಮಂಗಳೂರು: ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಹಿಂದುಳಿದ ವರ್ಗಗಳ ಐ.ಟಿ.ಐ., ಡಿಪ್ಲೋಮಾ, ಹಾಗೂ ಪದವಿ ಪೂರೈಸಿದ ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆ (ಕೆ.ಜಿ.ಟಿ.ಟಿ.ಐ.), ಮಂಗಳೂರು ಈ ಸಂಸ್ಥೆಯಲ್ಲಿ ಸಿಸ್ಕೊ ಸರ್ಟಿಫೈಡ್ ನೆಟ್ವರ್ಕ್ ಅಸೋಸಿಯೇಟ್ (ಸಿ.ಸಿ.ಎನ್.ಎ), ಸಿಸ್ಕೊ ಐ.ಟಿ. ಎಸೆನ್ಸಿಯಲ್ಸ್, ರೆಫ್ರಿಜರೇಶನ್ ಮತ್ತು ಏರ್ ಕಂಡೀಷನಿಂಗ್, ಟ್ಯಾಲಿ ಇಖಕ/ಕಖಖಬಇ ಕೋರ್ಸ್‌ಗಳಲ್ಲಿ ಉಚಿತ ಅಲ್ಪಾವಧಿ ಕೌಶಲ್ಯ ತರಬೇತಿಗೆ ಅರ್ಜಿ ಸಲ್ಲಿಸಬಹುದು.

ಆಸಕ್ತ ಅಭ್ಯರ್ಥಿಗಳು ಮಂಗಳೂರಿನ ಕದ್ರಿಹಿಲ್ಸ್‌ಲ್ಲಿರುವ ಸರಕಾರಿ ಮಹಿಳಾ ಐ.ಟಿ.ಐ.ಯ ಎರಡನೇ ಮಹಡಿಯಲ್ಲಿರುವ ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆ (ಕೆ.ಜಿ.ಟಿ.ಟಿ.ಐ.)ಯ ಕಚೇರಿಯಿಂದ ಅರ್ಜಿ ಪಡೆದು ತರಬೇತಿಗೆ ಹೆಸರು ನೊಂದಾಯಿಸಬಹುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 0824–2211477, 8277741731 ಸಂಪರ್ಕಿಸುವಂತೆ ಕೆ.ಜಿ.ಟಿ.ಟಿ.ಐ. ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನಧಿಕೃತ ಬ್ಯಾನರ್, ಕಟೌಟ್; ಕ್ರಿಮಿನಲ್ ಕೇಸ್: ಮಹಾನಗರಪಾಲಿಕೆ ಎಚ್ಚರಿಕೆ

ಮಂಗಳೂರು: ಮಂಗಳೂರು ಮಹಾನಗರಪಾಲಿಕೆಯ ವಿವಿಧ ಪ್ರದೇಶದ ರಸ್ತೆ ಬದಿಗಳಲ್ಲಿ ಕೆಲವೊಂದು ಜಾಹೀರಾತು ಸಂಸ್ಥೆಯವರು ಹಾಗೂ ಖಾಸಗಿ ವ್ಯಕ್ತಿಗಳು ವಾಣಿಜ್ಯ ಉದ್ದೇಶಗಳಿಗಾಗಿ ಹಾಗೂ ಹಾಗೂ ರಾಜಕೀಯ ಮತ್ತು ಧಾರ್ಮಿಕ ಮತ್ತು ಕೆಲವೊಂದು ಖಾಸಗಿ ಸಮಾರಂಭಗಳ ನಿಮಿತ್ತ ಅನಧಿಕೃತ ಬ್ಯಾನರ್ಗಳು, ಕಟೌಟ್, ಬಂಟಿಂಗ್ಸ್, ಮತ್ತು ಫ್ಲೆಕ್ಸ್ ಇತ್ಯಾದಿಗಳನ್ನು ವ್ಯಾಪಕವಾಗಿ ಅಳವಡಿಸುತ್ತಿರುವುದು ಕಂಡುಬಂದಿದೆ.

ಪಾದಚಾರಿಗಳಿಗೆ ಮತ್ತು ವಾಹನ ಸವಾರರಿಗೆ ಇದರಿಂದ ತೀವ್ರ ತೊಂದರೆಯಾಗುತ್ತಿದ್ದು, ಅಪಘಾತ ಪ್ರಕರಣಗಳು ಹೆಚ್ಚಾಗುವ ಸಾಧ್ಯತೆಗಳಿರುವುದಲ್ಲದೆ ಸಾರ್ವಜನಿಕ ಸ್ಥಳಗಳನ್ನು ವಿರೂಪಗೊಳಿಸಿದಂತಾಗುತ್ತಿದೆ. ಅಲ್ಲದೇ, ವಿದ್ಯುತ್ ಅವಘಡಗಳು ಉಂಟಾಗಿ ಪ್ರಾಣಹಾನಿ ಸಂಭವಿಸುವ ಸಾಧ್ಯತೆ ಇದೆ. ಕೆಲವೊಂದು ವಿವಾದಾತ್ಮಕ ಮತ್ತು ದ್ವೇಷ ಸಂದೇಶ ಸಾರುವ ಫ್ಲೆಕ್ಸ್‌ಗಳು ಅಳವಡಿಸುತ್ತಿರುವುದರಿಂದ ಶಾಂತಿ ಸುವ್ಯವಸ್ಥೆಗೆ ದಕ್ಕೆಯಾಗಿ ಅಹಿತಕರ ಘಟನೆಗಳು ಸಂಭವಿಸುವ ಸಾಧ್ಯತೆಗಳ ಬಗ್ಗೆ ಪೇಲೀಸ್ ಇಲಾಖೆಯಿಂದ ಆಕ್ಷೇಪ ವ್ಯಕ್ತವಾಗುತ್ತಿದೆ.

ಆದ್ದರಿಂದ ಎಲ್ಲಾ ರೀತಿಯ ಅನಧಿಕೃತ ಬ್ಯಾನರ್, ಕಟೌಟ್, ಬಂಟಿಂಗ್ ಮತ್ತು ಫ್ಲೆಕ್ಸ್ ಇತ್ಯಾದಿಗಳನ್ನು ಅಳವಡಿಸುತ್ತಿರುವುದನ್ನು ಈ ಕೂಡಲೇ ಸ್ಥಗಿತಗೊಳಿಸಬೇಕು. ಮಹಾನಗರಪಾಲಿಕೆ ಆಧೀನದಲ್ಲಿ ಸರ್ಕಾರಿ ಮತ್ತು ಖಾಸಗಿ ಸ್ಥಳಗಳಲ್ಲಿ ಒಟ್ಟು 1084 ಅಧಿಕೃತ ಜಾಹೀರಾತು ಫಲಕಗಳಿದ್ದು, ಈ ಜಾಹೀರಾತು ಫಲಕಗಳನ್ನು ಬಳಕೆ ಮಾಡಿ ಜಾಹೀರಾತುಗಳನ್ನು ಪ್ರಕಟಿಸುವಂತೆ ಸಾರ್ವಜನಿಕರಿಗೆ ಕೋರಲಾಗಿದೆ.

ಅನಧಿಕೃತ ಫ್ಲೆಕ್ಸ್, ಬ್ಯಾನರ್ ಇತ್ಯಾದಿಗಳನ್ನು ಅಳವಡಿಸಿರುವುದು ಕಂಡುಬಂದಲ್ಲಿ ಸಾರ್ವಜನಿಕ ತೆರೆದ ಸ್ಥಳಗಳ ವಿರೂಪಗೊಳಿಸುವಿಕೆ ಕಾಯ್ದೆ, 1981 (The Karnataka Open Places (Prevention of Disfigurement) Act, 1981) ಪ್ರಕಾರ ಹಾಗೂ ಅನಧಿಕೃತ ಫಲಕಗಳ ಮೂಲಕ ಯಾವುದಾದರೂ ಶಾರ್ಟ್ ಸಢಕ್ಯೂಟ್ ಅಥವಾ ವಿದ್ಯುತ್ ಅವಘಡಗಳಾಗಿ ಪ್ರಾಣಹಾನಿ ಸಂಭವಿಸಿದಲ್ಲಿ ಸಂಬಂಧಪಟ್ಟ ಸಂಸ್ಥೆ ಅಥವಾ ವ್ಯಕ್ತಿ ಅಥವಾ ಪ್ರಕಟಣೆಗಳ ಕಾರಣರಾದವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಮಹಾನಗರಪಾಲಿಕೆ ಆಯುಕ್ತರು ಎಚ್ಚರಿಸಿದ್ದಾರೆ.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವಕ್ಕೆ ಅದ್ದೂರಿ ಚಾಲನೆ

ಮೊದಲನೇ ಪುಟದಿಂದ}

ಅನ್ನ ನೀಡುವ ರೈತರು; ಅಕ್ಷರ ಕಲಿಸುವ ಶಿಕ್ಷಕರು ಹಾಗೂ ದೇಶ ಕಾಯುವ ಸೈನಿಕರ ಗೌರವಿಸುವ ಕೆಲಸವನ್ನು ನಾವೆಲ್ಲರೂ ಮಾಡಬೇಕಿದೆ ಎಂದರು.

ರಾಯಣ್ಣನ ಹುಟ್ಟೂರು ಸಂಗೊಳ್ಳಿ ಹಾಗೂ ನೇಣುಗಂಬಕ್ಕೇರಿದ ಖಾನಾಪುರ ತಾಲ್ಲೂಕಿನ ನಂದಗಡದ ಸಮಗ್ರ ಅಭಿವೃದ್ಧಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ನಾವು ಸಂಗೊಳ್ಳಿ ರಾಯಣ್ಣ ಆಗದಿದ್ದರೂ ಪರವಾಗಿಲ್ಲ; ಅವರ ದೇಶಪ್ರೇಮವನ್ನಾದರೂ ನಾವೆಲ್ಲರೂ ಮೈಗೂಡಿಸಿ ಕೊಳ್ಳಬೇಕು. ಜಾತಿಧರ್ಮ ಬದಿಗಿಟ್ಟು ದೇಶಪ್ರೇಮವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸೈನಿಕ ಶಾಲೆಯ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಲಾಗುವುದು. ಪ್ರಾಧಿಕಾರಕ್ಕೂ ಆರ್ಥಿಕ ನೆರವು ಒದಗಿಸಲಾಗುವುದು.

ಶಾಸಕ ಮಹಾಂತೇಶ ಕೌಜಲಗಿ ಸಭ್ಯಸ್ಥ ರಾಜಕಾರಣಿ; ಅವರಂತಹ ಸಭ್ಯರು ಹಾಗೂ ಜಾತ್ಯಾತೀತರು ರಾಜಕಾರಣಕ್ಕೆ ಬರಬೇಕು. ಸೈನಿಕ ಶಾಲೆಯಲ್ಲಿ ಕರ್ನಾಟಕದ ಅಭ್ಯರ್ಥಿಗಳಿಗೆ ಹೆಚ್ಚಿನ ಪ್ರವೇಶ ಕಲ್ಪಿಸಲು ಅವಕಾಶ ಕಲ್ಪಿಸುವ ಕುರಿತು ಪರಿಶೀಲಿಸಲಾಗುವುದು ಎಂದು ಮುಖ್ಯಮಂತ್ರಿ ಭರವಸೆ ನೀಡಿದರು.

ಕರ್ನಾಟಕ ರಾಜ್ಯ ಆರ್ಥಿಕವಾಗಿ ಸಬಲವಾಗಿದೆ: ಗ್ಯಾರಂಟಿ ಯೋಜನೆಗಳನ್ನು ಅತ್ಯಂತ ಸಮರ್ಪಕವಾಗಿ ಅನುಷ್ಠಾನಗೊಳಿಸಿಯೂ ಕರ್ನಾಟಕ ರಾಜ್ಯ ಆರ್ಥಿಕವಾಗಿ ಸಬಲವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಂಕಿ–ಅಂಶಗಳ ಸಮೇತ ಲೆಕ್ಕ ಬಿಚ್ಚಿಟ್ಟರು.

ಸರಕಾರ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ಅಪಪ್ರಚಾರ ಮಾಡಲಾಗುತ್ತಿದೆ.

ಸೈನಿಕ ಶಾಲೆಯಲ್ಲಿ ಕನ್ನಡದವರಿಗೆ ಶೇ 65 ರಷ್ಟು ಸೀಟು: ಸಿಎಂ ಘೋಷಣೆ

ಬೆಳಗಾವಿ: ಸೈನಿಕ ಶಾಲೆಯಲ್ಲಿ ಕನ್ನಡದವರಿಗೆ ಸೀಟುಗಳನ್ನು 65% ರಷ್ಟು ಹಾಗೂ ಇತರರಿಗೆ ಶೇ 35 ರಷ್ಟು ಸೀಟುಗಳು ಹಂಚಿಕೆಯಾಗಬೇಕೆಂದು ಕ್ರಮ ಕೈಗೊಳ್ಳಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಒಂದು ವೇಳೆ ದಿವಾಳಿಯಾಗಿದ್ದರೆ ಪಂಚ ಗ್ಯಾರಂಟಿ ಯೋಜನೆಗಳನ್ನು ಮತ್ತು ಇತರೆ ಅಭಿವೃದ್ಧಿ ಯೋಜನೆ ಜಾರಿಗೊಳಿಸಲು ಹೇಗೆ ಸಾಧ್ಯವಿತ್ತು ಎಂದು ಪ್ರಶ್ನಿಸಿದರು.

ಸೈನಿಕ ಶಾಲೆ ಮಾದರಿಯ ಶಾಲೆಗಳನ್ನು ಆರಂಭಿಸಲು ಜಾರಕಿಹೊಳಿ ಒತ್ತಾಯ: ಬೆಳಗಾವಿ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ, ಸಂಗೊಳ್ಳಿ ರಾಯಣ್ಣನವರ ಹೆಸರು ದೇಶದಾದ್ಯಂತ ಪ್ರಸಿದ್ಧಿಗೊಳಿಸಲು ಅನುಕೂಲವಾಗುವಂತೆ ಸೈನಿಕ ಶಾಲೆಯನ್ನು ಆರಂಭಿಸಲಾಗಿದೆ. ಈ ಶಾಲೆ ಇಡೀ ದೇಶಕ್ಕೆ ಮಾದರಿಯಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಸ್ಥಳೀಯ ಮಕ್ಕಳಿಗೆ ಪ್ರವೇಶ ಕಲ್ಪಿಸಲು ಅನುಕೂಲವಾಗುವಂತೆ ರಾಜ್ಯದಾದ್ಯಂತ ಸೈನಿಕ ಶಾಲೆಯ ಮಾದರಿಯಲ್ಲಿ ಸಂಗೊಳ್ಳಿ ರಾಯಣ್ಣ ಶಾಲೆಗಳನ್ನು ಸ್ಥಾಪಿಸಬೇಕಿದೆ. ಈ ನಿಟ್ಟಿನಲ್ಲಿ ಸರಕಾರ ಕ್ರಮ ಕೈಗೊಳ್ಳಬೇಕು ಎಂದು ಸತೀಶ್ ಜಾರಕಿಹೊಳಿ ಒತ್ತಾಯಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಾದ ಶಿವರಾಜ್ ತಂಗಡಗಿ, ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಗೆ ಕರ್ನಾಟಕ ಸರಕಾರವು ಭೂಮಿ ಸೇರಿದಂತೆ ಮೂಲಸೌಕರ್ಯಗಳನ್ನು ಕಲ್ಪಿಸಿರುವುದರಿಂದ ಶೇ.65 ಮತ್ತು 35ರ ಅನುಪಾತದಲ್ಲಿ ಪ್ರವೇಶ ಕಲ್ಪಿಸಬೇಕು; ಇಂತಹ ಶಾಲೆಗಳನ್ನು ರಾಜ್ಯದಲ್ಲಿ ಹೋಬಳಿ ಮಟ್ಟದಲ್ಲಿ ಸ್ಥಾಪಿಸಬೇಕು ಎಂದು ಹೇಳಿದರು.

ನಗರಾಭಿವೃದ್ಧಿ ಇಲಾಖೆಯ ಸಚಿವರಾದ ಸುರೇಶ್ ಬಿ.ಎಸ್. ಅವರು ಮಾತನಾಡಿ, 257 ಕೋಟಿ ರೂಪಾಯಿ ವೆಚ್ಚದಲ್ಲಿ ದೇಶದಲ್ಲಿ ಮಾದರಿ ಸೈನಿಕ ಶಾಲೆ ಸ್ಥಾಪಿಸಿದ ಕೀರ್ತಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಲ್ಲುತ್ತದೆ ಎಂದರು.

ಸವದತ್ತಿ ಯಲ್ಲಮ್ಮ ದೇವಸ್ಥಾನ, ಸಂಗೊಳ್ಳಿ ರಾಯಣ್ಣ ಜನ್ಮಸ್ಥಳ, ಕಿತ್ತೂರು ರಾಣಿ ಚೆನ್ನಮ್ಮಳ ಜನ್ಮಸ್ಥಳ ಹೀಗೆ ಅನೇಕ ಐತಿಹಾಸಿಕ ಹಾಗೂ ಧಾರ್ಮಿಕ ಸ್ಥಳಗಳಿರುವುದರಿಂದ ಈ ಕ್ಷೇತ್ರಗಳನ್ನು ಪ್ರವಾಸಿತಾಣಗಳನ್ನಾಗಿ ರೂಪಿಸುವ ಕೆಲಸ ನಡೆದಿದೆ.

ಜನರಿಗೆ ನೀಡಿರುವ ಭರವಸೆಯನ್ನು ಈಡೇರಿಸುವ ಮೂಲಕ ಮುಖ್ಯಮಂತ್ರಿಗಳು ಬಸವಾದಿ ಶರಣರು ಹಾಗೂ ಸಂವಿಧಾನದ ಆಶಯದಂತೆ ಪ್ರತಿಯೊಬ್ಬರನ್ನು ಒಳಗೊಂಡ ಸಮ ಸಮಾಜ ನಿರ್ಮಿಸಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಮಾಜಿ ಸಚಿವ ಹಾಗೂ ಸಂಗೊಳ್ಳಿ ರಾಯಣ್ಣ ಕ್ಷೇತ್ರಾಧ್ಯಯನ ಸಮಿತಿ ಅಧ್ಯಕ್ಷರಾದ ಎಚ್. ಎಂ.ರೇವಣ್ಣ, ಅಪ್ಪಟ ದೇಶಪ್ರೇಮಿ ಹಾಗೂ ಕೆಚ್ಚೆದೆಯ ಹೋರಾಟಗಾರನಾದ ಸಂಗೊಳ್ಳಿ ರಾಯಣ್ಣನ ಚರಿತ್ರೆ ಮೆಲುಕು ಹಾಕುವುದರ ಜತೆಗೆ ಯುವಪೀಳಿಗೆಗೆ ತಲುಪಿಸಲು ಉತ್ಸವದ ಉದ್ದೇಶವಾಗಿದೆ ಎಂದರು.

ಸೈನಿಕ ಶಾಲೆಯಲ್ಲಿ ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳ ಪ್ರವೇಶಕ್ಕೆ ಆದ್ಯತೆ ನೀಡುವಂತೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಭಾರತದಲ್ಲಿಯೇ ಅತ್ಯುತ್ತಮ ಮ್ಯೂಸಿಯಂ ಖಾನಾಪುರ ತಾಲ್ಲೂಕಿನ ನಂದಗಡದಲ್ಲಿ ಸ್ಥಾಪಿಸಲಾಗಿದ್ದು, ಶೀಘ್ರದಲ್ಲಿ ಯೇ ಮುಖ್ಯಮಂತ್ರಿಗಳು ಉದ್ಘಾಟಿಸಲಿದ್ದಾರೆ ಎಂದು ರೇವಣ್ಣ ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಬೈಲಹೊಂಗಲ್ ಶಾಸಕ ಮಹಾಂತೇಶ್ ಕೌಜಲಗಿ, ಈ ಭಾಗದ ಜನರ ಆಶಯದಂತೆ ಸುಸಜ್ಜಿತ ಸೈನಿಕ ಶಾಲೆ ಹಾಗೂ ಶಿಲ್ಪವನ ಲೋಕಾರ್ಪಣೆಗೊಂಡಿರುವುದು ಸಂತಸ ತಂದಿದೆ ಎಂದರು.

ಅಪ್ಪಟ ದೇಶಪ್ರೇಮಿ ಸಂಗೊಳ್ಳಿ ರಾಯಣ್ಣನ ಹೆಸರಿನಲ್ಲಿ ನೂರು ಎಕರೆ ವಿಸ್ತೀರ್ಣದಲ್ಲಿ ನಿರ್ಮಿಸಲಾಗಿರುವ ಶಾಲೆಯು ಇಡೀ ದೇಶಕ್ಕೆ ಮಾದರಿಯಾಗಿದೆ.

ಜನರಿಗೆ ನೀಡಿದ ಭರವಸೆಯಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿರುವುದು ಮುಖ್ಯಮಂತ್ರಿಗಳ ಮಹತ್ಸಾಧನೆಯಾಗಿದೆ ಎಂದು ಹೇಳಿದರು.

45 ವರ್ಷದ ಹಿಂದಿನ ಮಲಪ್ರಭಾ ಯೋಜನೆಯಡಿ ಬೈಲಹೊಂಗಲ್ ಮತಕ್ಷೇತ್ರದ 48 ಹಳ್ಳಿಗಳು ಮುಳುಗಡೆಯಾಗಿವೆ. ಈ ಗ್ರಾಮಗಳ ಜನರ ಅನುಕೂಲಕ್ಕಾಗಿ ಆರಂಭಿಸಲಾಗಿರುವ ಏತ ನೀರಾವರಿ ಯೋಜನೆಗಳು ಸ್ಥಗಿತಗೊಂಡಿದ್ದು, ಆ ಯೋಜನೆಗಳ ಅನುಷ್ಠಾನಕ್ಕೆ ಮುಂಬರುವ ಆಯವ್ಯಯದಲ್ಲಿ ವಿಶೇಷ ಅನುದಾನ ಒದಗಿಸಬೇಕು ಎಂದು ಶಾಸಕ ಮಹಾಂತೇಶ ಕೌಜಲಗಿ ಅವರು ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು.

ಸಾನಿಧ್ಯ ವಹಿಸಿದ್ದ ಶ್ರೀ ಕ್ಷೇತ್ರ ಕಾಗಿನೆಲೆ ಕನಕ ಗುರುಪೀಠದ ಶ್ರೀ ನಿರಂಜನಾನಂದಪುರಿ ಮಹಾಸ್ವಾಮೀಜಿ, ಮಕ್ಕಳನ್ನು ಸೈನ್ಯಕ್ಕೆ ಸೇರಿಸಲು ಹಾಗೂ ದೇಶಪ್ರೇಮವನ್ನು ಬೆಳೆಸಲು ಸೈನಿಕ ಶಾಲೆ ಅನುಕೂಲಕರವಾಗಿದೆ ಎಂದರು.

ಸಂಗೊಳ್ಳಿ ಹಿರೇಮಠದ ಗುರು ಸಿದ್ಧಲಿಂಗೇಶ್ವರ ಸಂಸ್ಥಾನದ ಗುರುಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ

ಅರಭಾವಿ ಕ್ಷೇತ್ರದಲ್ಲಿ ಕುಡಿಯುವ ನೀರಿಗೆ ಪ್ರಥಮ ಆದ್ಯತೆ ನೀಡಿ: ಶಾಸಕ ಬಾಲಚಂದ್ರ ಜಾರಕಿಹೊಳಿ

ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ಅಧಿಕಾರಿಗಳು ಸನ್ನದ್ಧರಾಗಿ

ಮೂಡಲಗಿ:ಅರಭಾವಿ ಕ್ಷೇತ್ರದಲ್ಲಿ ಕುಡಿಯುವ ನೀರಿಗೆ ಪ್ರಥಮ ಆದ್ಯತೆ ನೀಡಬೇಕು. ಮುಂಬರುವ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರಲಿದ್ದು, ಈ ಪರಸ್ಥಿತಿಯನ್ನು ನಿಭಾಯಿಸಲು ಅಧಿಕಾರಿಗಳು ಸನ್ನದ್ಧರಾಗಬೇಕು. ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳುವಂತೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾದಂದು ಪಟ್ಟಣದ ತಹಶೀಲ್ದಾರ ಕಾರ್ಯಾಲಯದಲ್ಲಿ ಜರುಗಿದ ಮೂಡಲಗಿ ಮತ್ತು ಗೋಕಾಕ ತಾಲೂಕಾ ಮಟ್ಟದ ಟಾಸ್ಕ್ ಫೋರ್ಸ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಾರದೊಳಗೆ ಆಯಾ ಗ್ರಾಮಗಳಲ್ಲಿನ ಸ್ಥಿತಿಗತಿಗಳನ್ನು ಅರಿತು ಸಂಬಧಿಸಿದ ಅಧಿಕಾರಿಗಳಿಗೆ ವರದಿ ಮಾಡುವಂತೆ ಹೇಳಿದರು

ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ಸ್ಥಳಿಯ ಮಟ್ಟದ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು, ಈ ಬಾರಿ ಮಳೆರಾಯನು ಕೈ ಕೊಟ್ಟಿದ್ದರಿಂದ ಕುಡಿಯುವ ನೀರಿನ ಸಮಸ್ಯೆ ತಲೆದೋರಿದ್ದು, ಅವುಗಳನ್ನು ಪರಿಹರಿಸಲು ತಕ್ಷಣವೇ ಮೇಲಾಧಿಕಾರಿಗಳಿಗೆ ವರದಿಯನ್ನು ಒಪ್ಪಿಸುವಂತೆ ಸೂಚನೆ ನೀಡಿದರು.

ಕುಡಿಯುವ ನೀರಿನ ಸಮಸ್ಯೆಗೆ ಮೊದಲು ಆದ್ಯತೆ ನೀಡಬೇಕು, ಸಾರ್ವಜನಿಕರಿಗೆ

ಯಾವುದೇ ಸಮಸ್ಯೆ ತಲೆದೋರದಂತೆ ಕರ್ತವ್ಯ ನಿರ್ವಹಿಸಬೇಕು, ಎಲ್ಲಿ ಗಂಭೀರ ಸ್ವರೂಪದ ನೀರಿನ ಸಮಸ್ಯೆಗಳು ಇದೆಯೋ ಅಲ್ಲಿ ಟ್ಯಾಂಕರ ಮೂಲಕ ನೀರನ್ನು ಸರಬರಾಜು ಮಾಡಲು ಅಗತ್ಯ ಕ್ರಮ ಕೈಗೋಳಬೇಕು, ಸ್ಥಳೀಯ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಸಾರ್ವಜನಿಕ ಸಮಸ್ಯೆಗಳನ್ನು ಈಡೇರಿಸುವ ಕೆಲಸ ಮಾಡುವಂತೆ ಅವರು ಸೂಚನೆ ನೀಡಿದರು.

ಅರಭಾವಿ ಮತ ಕ್ಷೇತ್ರದಲ್ಲಿ ಒಳಪಟ್ಟಿರುವ ಕೆಲವು ಗ್ರಾಮಗಳಲ್ಲಿ ಪ್ರಸಕ್ತ ಸ್ಥಿತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಫೆಬ್ರುವಾರಿ 20ರೊಳಗೆ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸುವದಿಲ್ಲ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಅಷ್ಟರೋಳಗೆ ಮತ್ತೊಂದು ಬಾರಿ ಘಟಪ್ರಭಾ ಎಡದಂಡೆ ಮತ್ತು ಬಲದಂಡೆ ಕಾಲುವೆಗಳಿಗೆ ನೀರನ್ನು ಹರಿಸಿದರೆ ಜನ ಹಾಗೂ ಜಾನುವಾರುಗಳಿಗೆ ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ಹಿಡಕಲ್ ಜಲಾಶಯದಿಂದ ಕಾಲುವೆಗಳಿಗೆ ನೀರನ್ನು ಬಿಡುಗಡೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ನೂರಾರು ಕೋಟಿ ರೂಪಾಯಿ ಮೊತ್ತದ ಜೆಜೆಎಮ್ ಕಾಮಗಾರಿ ಬಗ್ಗೆ ಈಗಾಗಲೇ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಬಂದಿವೆ. ಸಾರ್ವಜನಿಕರಿಗೆ ಕುಡಿಯುವ ನೀರು ಕಲ್ಪಿಸಿ ಕೊಡುವ ಮಹತ್ವಕಾಂಕ್ಷೆ ಯೋಜನೆಯಾಗಿರುವ ಜೆಜೆಎಮ್ ಬಗ್ಗೆ ಹಲವು ಕಡೆಗಳಲ್ಲಿ ಅಪಸ್ವರಗಳು ಬರುತ್ತಿವೆ. ಸರಕಾರದ ಈ ಯೋಜನೆಯನ್ನು ಜನರಿಗೆ ತಲುಪಿಸುವಲ್ಲಿ ಅಧಿಕಾರಿಗಳು ನಿರ್ಲಕ್ಷ ವಹಿಸಿದ್ದಾರೆ ಎಂದು ಶಾಸಕರು ತಿಳಿಸಿದರು.

ಕೌಜಲಗಿ–ಮನ್ನಿಕೇರಿ, ಕೌಜಲಗಿ–ಕುಲಗೋಡ, ಬೇಟಗೇರಿ–ಬಗರನಾಳ, ತುಕ್ಕಾನಟ್ಟಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ ಅವರು, ಇದೇ ಮಾರ್ಚ ತಿಂಗಳ ಒಳಗಾಗಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳ್ಳಿಸುವಂತೆ ಶಾಸಕ ಬಾಚಂದ್ರ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಮೂಡಲಗಿ ತಹಶೀಲ್ದಾರ ಮಹಾದೇವ ಸನಮುರಿ, ಗೋಕಾಕ ತಹಶೀಲ್ದಾರ ಡಾ.ಮೋಹನ ಭಸ್ಮೆ, ಮೂಡಲಗಿ ತಾ.ಪಂ ಇಒ ಎಫ್.ಜಿ.ಜಿನನ್ನವರ, ಗೋಕಾಕ ತಾ.ಪಂ ಇಒ ಉದಯಕುಮಾರ ಕಾಂಬಳ್ಳೆ, ಮೂಡಲಗಿ ಪುರಸಭೆ ಮುಖ್ಯಾಧಿಕಾರಿ ದೀಪಕ ಹರ್ದಿ ಸೇರಿದಂತೆ ಗೋಕಾಕ ಮತ್ತು ಮೂಡಲಗಿ ತಾಲೂಕಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಒಂದೇ ಕುಟುಂಬದ ಮೂವರು ಸಾವು

ದಾವಣಗೆರೆ: ಭತ್ತದ ಹುಲ್ಲು ತುಂಬಿಕೊಂಡು ಹೋಗುತ್ತಿದ್ದ ಟ್ರ್ಯಕ್ಟರ್‌ಗೆ ಓಮಿನಿ ಕಾರು ಡಿಕ್ಕಿ ಹೊಡೆದ ಪರಿಣಾಮ ಒಂದೇ ಕುಟುಂಬದ ಮೂವರ ಸಾವನ್ನಪ್ಪಿದ್ದು, ಇಬ್ಬರು ಗಾಯಗೊಂಡಿರುವ ಘಟನೆ ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ಗುಳ್ಳೇನಹಳ್ಳಿ ಬಳಿಯ ಬೀರೂರು–ಸಮ್ಮಸ್ ರಸ್ತೆಯ ರಾಜ್ಯ ಹೆದ್ದಾರಿಯಲ್ಲಿ ನಡೆದಿದೆ. ರುದ್ರೇಶಪ್ಪ (64), ಮಲ್ಲಿಕಾರ್ಜುನ್ (62) ಹಾಗೂ ಗಂಗಮ್ಮ (80 ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮೃತರು ಹಾಗೂ ಗಾಯಾಳುಗಳು ಚನ್ನಗಿರಿ ತಾಲೂಕಿನ ನಾರಶೆಟ್ಟಿಹಳ್ಳಿ ಗ್ರಾಮದ ನಿವಾಸಿಗಳಾಗಿದ್ದು, ಸಂತೆಬೆನ್ನೂರು ಕಡೆಯಿಂದ ಚನ್ನಗಿರಿಗೆ ಒಮಿನಿಯಲ್ಲಿ ಒಂದೇ ಕುಟುಂಬಸ್ಥರು ಹೋಗುವಾಗ ಎದುರಿಗೆ ಭತ್ತದ ಹುಲ್ಲು ತುಂಬಿಕೊಂಡು ಬರುತ್ತಿದ್ದ ಟ್ರ್ಯಕ್ಟರ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ವಾಹನದ ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿದೆ. ಸ್ಥಳದಲ್ಲೇ ಮೂವರು ಸಾವನ್ನಪ್ಪಿದ್ದು. ಗಾಯಾಳುಗಳಿಗೆ ಚನ್ನಗಿರಿ ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಸಂಬಂಧ ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಘಟನಾ ಸ್ಥಳಕ್ಕೆ ಚನ್ನಗಿರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಬೆಳಗಾವಿಗೆ ಬರುತ್ತಿದ್ದ ಲಾರಿ ಟ್ಯಾಂಕರ್‌ನಲ್ಲಿ 50 ಲಕ್ಷ ಮೌಲ್ಯದ ಮದ್ಯ ವಶ

ಹುಬ್ಬಳ್ಳಿ: ಬೆಂಗಳೂರಿನಿಂದ ಬೆಳಗಾವಿಗೆ ಬರುತ್ತಿದ್ದ ಲಾರಿ ಟ್ಯಾಂಕರ್‌ನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 50 ಲಕ್ಷ ಮೌಲ್ಯದ ಮದ್ಯವನ್ನು ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳು ಧಾರವಾಡದ ನರೇಂದ್ರ ಟೋಲ್‌ನಲ್ಲಿ ವಶಪಡಿಸಿಕೊಂಡಿದ್ದಾರೆ.

ವಾಣಿಜ್ಯ ತೆರಿಗೆ ಇಲಾಖೆಯ ಸಹಾಯಕ ಆಯುಕ್ತ ವಿಜಯಕುಮಾರ ಸನದಿ, ಜನವರಿ 11ರಂದು ಧಾರವಾಡದ ನರೇಂದ್ರ ಟೋಲ್‌ನಲ್ಲಿ ಟ್ಯಾಂಕರ್ ತಡೆದು ತಪಾಸಣೆ ನಡೆಸಿದಾಗ, ಪ್ರಕರಣ ಬೆಳಕಿಗೆ ಬಂದಿದೆ. 3 ಸಾವಿರ ಲೀಟರ್

ಸುಟ್ಟ ಆಯಿಲ್ ಸಾಗಿಸಲು ಕಬ್ಬಿಣದ ಸ್ಕ್ರ್ಯಾಪ್ ಮಾರಾಟಗಾರರ ಹೆಸರಿನಲ್ಲಿ 7 ಲಕ್ಷ ನಕಲಿ ಬಿಲ್ ಸೃಷ್ಟಿಸಲಾಗಿತ್ತು. ಬಿಲ್ ಪರಿಶೀಲಿಸಿದಾಗ ನಕಲಿ ಎಂದು ಗೊತ್ತಾಗಿದೆ ಎಂದು ಅಧಿಕಾರಿಗಳು ತಿಳಿಸಿದರು.

ಘಟನೆ ನಂತರ ಲಾರಿ ಚಾಲಕ ರಾಜಸ್ಥಾನದ ಮೋಹನ್‌ಲಾಲ್ ಪರಾರಿಯಾಗಿದ್ದ.

ಹೀಗಾಗಿ ಟ್ಯಾಂಕರ್ ಜಪ್ತಿ ಮಾಡಲಾಗಿತ್ತು. ಎರಡನೇ ಶನಿವಾರ, ಸಂಕ್ರಾಂತಿ ಹಬ್ಬದ ನಿಮಿತ್ತ ರಜೆ ಇದ್ದುರಿಂದ ಟ್ಯಾಂಕರ್ ತಪಾಸಣೆ ಮಾಡಿರಲಿಲ್ಲ. ಜನವರಿ 16ರಂದು ಭೌತಿಕ ತಪಾಸಣೆ ಮಾಡಿದಾಗ ಟ್ಯಾಂಕರ್‌ನಲ್ಲಿ ಮದ್ಯ ಬಾಟಲಿಗಳಿದ್ದ ಬಾಕ್ಸ್‌ಗಳಿದ್ದವು' ಎಂದರು.

ಬೆಂಗಳೂರಿನ ಸೋಮಾನಿ ಟ್ರೇಡರ್ಸ್ ಹೆಸರಲ್ಲಿ ರಾಜಸ್ಥಾನದ ನಿಶಾಂತ ಲುಬ್ರಿಕಂಟ್ಸ್‌ಗೆ ಸಾಗಾಟ ಮಾಡಲು ನಕಲಿ ಬಿಲ್ ಸೃಷ್ಟಿಸಲಾಗಿದೆ. ಈ ಎರಡೂ ಹೆಸರುಗಳೂ ನಕಲಿಯಾಗಿವೆ. 20 ಸಾವಿರ ಲೀಟರ್ ಸಾಮರ್ಥ್ಯದ ಟ್ಯಾಂಕರ್‌ನಲ್ಲಿ ಕೇವಲ 3 ಸಾವಿರ ಲೀಟರ್ ಸುಟ್ಟ ಆಯಿಲ್‌ಗೆ ಸಾಗಣೆ ಮಾಡಲು ಬಿಲ್‌ನಲ್ಲಿ ನಮೂದಿಸಲಾಗಿತ್ತು ಎಂದರು.

ಟ್ಯಾಂಕರ್‌ನ ನೋಂದಣಿ ಸಂಖ್ಯೆ ಸಹ ನಕಲಿಯಾಗಿದ್ದು, ನಾಗಾಲ್ಯಾಂಡ್ ನೋಂದಣಿ ಸಂಖ್ಯೆ ಬಳಸಲಾಗಿದೆ. ಮದ್ಯದ ಬಾಟಲಿ ಮೇಲೆ ಅಂಟಿಸಿರುವ ಲೇಬಲ್ ಸಹ ನಕಲಿಯಾಗಿದೆ. ವಶಪಡಿಸಿಕೊಳ್ಳಲಾಗಿರುವ ಮದ್ಯವನ್ನು ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಹಸ್ತಾಂತರಿಸಲಾಗಿದೆ ಎಂದು ಹೇಳಿದರು.

ಸ್ವ ಉದ್ಯೋಗ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ) ವತಿಯಿಂದ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವಕ ಮತ್ತು ಮಹಿಳಾ ನಿರುದ್ಯೋಗಿಗಳಿಗೆ ಪಾಸ್ಟ್ ಫುಡ್ ಉದ್ಯೇಮಿ 10 ದಿನಗಳ ತರಬೇತಿಯನ್ನು ಜನವರಿ ತಿಂಗಳ ಕೊನೆ ವಾರದಲ್ಲಿ ಹಮ್ಮಿಕೊಳ್ಳಲಾಗಿಗುದು.

ಅರ್ಹತೆಗಳು:

18 ರಿಂದ 45 ವಯಸ್ಸಿನವರಾಗಿರಬೇಕು, ಗಾಮೀಣ ಪ್ರದೇಶದವರಾಗಿರಬೇಕು, (ಬಿಪಿಎಲ್ ಅಥವಾ ಜಾಬ್ ಕಾರ್ಡ್ ಹೊಂದಿರಬೇಕು.

ದಾಖಲತಿಗಳು:

ಬಿಪಿಎಲ್ ಕಾರ್ಡ್, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಮೂರು ಪಾಸ್‌ಪೋರ್ಟ್ ಸೈಜ್ ಭಾವಚಿತ್ರ ಲಗತಿಸಬೇಕು.

ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಇಮೇಲ್(cbrsetibelagavi@gmail.com) ಗೆ ಕಳುಹಿಸಬಹುದು ಹಾಗೂ ಗೂಗಲ್ ಲಿಂಕ್ (https://forms.gle/Y1hntNgHijkmga8d7) ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಜ.23 2024 ರಂದು ಕೊನೆ ದಿನವಾಗಿದು ತರಬೇತಿ ಅವಧಿಯಲ್ಲಿ ಊಟ ಮತ್ತು ವಸತಿ ಉಚಿತವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪಾಟ್ ನಂ. ಸಿಎ–03 (ಪಾರ್ಟ್) ಕಣಬರ್ಗಿ ಇಂಡಸ್ಟ್ರಿಯಲ್ ಏರಿಯಾ, ಆಟೋ ನಗರ. ಬೆಳಗಾವಿ–590015. ದೂ.ನಂ. 0831–2440644, 8296792166, 9845750043, 8867388906, 8050406866,9449860564 ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್.ಎಸ್.ಪಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2023–24 ನೇ ಸಾಲಿನಲ್ಲಿ ಜಿಲ್ಲೆಯ "Fees Reimbursement" PUC,Diploma,Technical & Professional courses, Graduates & Post Graduates ಮೆಟ್ರಿಕ–ನಂತರದ ವ್ಯಾಸಾಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳು ಮುಸ್ಲಿಂ, ಕ್ರಿಶ್ಚಿಯನ್, ಜೈನ, ಸಿಖ್, ಬೌದ್ಧ ಹಾಗೂ ಪಾರ್ಸಿ ವರ್ಗದವರ ವಿದ್ಯಾರ್ಥಿವೇತನಕ್ಕಾಗಿ ವಿದ್ಯಾರ್ಥಿಗಳು ಕಡ್ಡಾಯವಾಗಿ ರಾಜ್ಯ ಎಸ್.ಎಸ್.ಪಿ ವಿದ್ಯಾರ್ಥಿವೇತನಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ https://ssp.karnataka.gov.in. ವೆಬ್ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದು. ಅರ್ಜಿ ಸಲ್ಲಿಸಲು ಜ.30 2024 ಕೋನೆ ದಿನ ಆಗಿದು, ಅರ್ಜಿಗಳನ್ನು ವೆಬಸೈಟ್‌ನಲ್ಲಿ ಸಲ್ಲಿಸಿ ಅದರ ಒಂದು ಪ್ರತಿಯನ್ನು ತಮ್ಮ ತಮ್ಮ ಕಾಲೇಜುಗಳಲ್ಲಿ ದಾಖಲಾತಿಗಳೊಂದಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಇವರ ಕಾರ್ಯಾಲಯ, ಜಿಲ್ಲಾ ಮಾಹಿತಿ ಕೇಂದ್ರ ಹಾಗೂ ತಾಲೂಕಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳಾದ ಡಾ: ಅಬ್ದುಲರಶೀದ ಮಿರ್ಜನ್ನವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಗೃಹರಕ್ಷಕದಳದ ಗೌರವ ಸಮಾದೇಷ್ಟರ ಹುದ್ದೆ ಭರ್ತಿ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗೃಹರಕ್ಷಕದಳದ ಗೌರವ ಸಮಾದೇಷ್ಟರ ಹುದ್ದೆ ಖಾಲಿ ಇದ್ದು, ತುರ್ತಾಗಿ ಸರ್ಕಾರದ ಮಟ್ಟದಲ್ಲಿ ಆಯ್ಕೆಮಾಡಿ, ಅರ್ಹತೆ ಆಧಾರದ ಮೇಲೆ ಭರ್ತಿ ಮಾಡಬೇಕಾಗಿರುವುದರಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಮಾದೇಷ್ಟರ ನೇಮಕಾತಿಗಾಗಿ ಹೊಸದಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಜಿಲ್ಲಾ ಸಮಾದೇಷ್ಟರ ಹುದ್ದೆಯನ್ನು ಕರ್ನಾಟಕ ಗೃಹರಕ್ಷಕ ನಿಯಮಗಳು, 1963 ರ ನಿಯಮ 3–ಬಿ ಅನ್ವಯ ನಿಯಮಾನುಸಾರ ಭರ್ತಿ ಮಾಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಮೂನೆಯನ್ನು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪಡೆದುಕೊಳ್ಳುಬಹುದಾಗಿದೆ.

ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಜನವರಿ 30, 2024ರ ಒಳಗಾಗಿ "ಜಿಲ್ಲಾಧಿಕಾರಿಗಳು, ಬೆಳಗಾವಿ" ಇವರಿಗೆ ಸಲ್ಲಿಸಬೇಕು ಎಂದು ಆರಕ್ಷಕ ಮಹಾ ನಿರ್ದೇಶಕರು, ಗೃಹರಕ್ಷಕದಳದ ಮಹಾ ಸಮಾದೇಷ್ಟರು ಮತ್ತು ಪೌರರಕ್ಷಣೆ ನಿರ್ದೇಶಕರಾದ ಅಕ್ಷಯ ಎಂ. ಹಾಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾನೂನು ಮಾಪನಶಾಸ್ತ್ರ ಇಲಾಖೆ ಪ್ರಗತಿ

ಶಿವಮೊಗ್ಗ: ಗ್ರಾಹಕರ ಹಿತದೃಷ್ಟಿಯಲ್ಲಿ ಕಾನೂನು ಮಾಪನಶಾಸ್ತ್ರ ಇಲಾಖೆಯು 2023–24 ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ 2023 ರ ಏಪ್ರಿಲ್ ನಿಂದ ಡಿಸೆಂಬರ್ ವರೆಗೆ ಕೆಳಕಂಡಂತೆ ಪ್ರಗತಿಯನ್ನು ಸಾಧಿಸಿದೆ.

ತೂಕ, ಅಳತೆ ಸಾಧನಗಳ ಸತ್ಯಾಪನೆ/ಮುದ್ರೆಯಿಂ ಸಂಗ್ರಹಿಸಿದ ಶುಲ್ಕ ರೂ.1,53,64,167, ತಪಾಸಣೆ ಮಾಡಿರುವ ವ್ಯಾಪಾರಸ್ಥರ ಮತ್ತು ಕೈಗಾರಿಕೆಗಳ ಸಂಖ್ಯೆ ರೂ.2111, ತಪ್ಪಿತಸ್ಥರ ಮೇಲೆ ಹೂಡಿರುವ ಮೊಕದ್ದಮೆಗಳ ಸಂಖ್ಯೆ ರೂ.483, ರಾಜಿ ಅಭಿಸಂಧಾನ ಮಾಡಿರುವ ಮೊಕದ್ದಮೆಗಳ ಸಂಖ್ಯೆ 486, ಮೊಕದ್ದಮೆಗಳನ್ನು ರಾಜಿ ಅಭಿಸಚಿಧಾನ ಮಾಡಿ ವಿಧಿಸಿದ ದಂಡ ರೂ.16,11,000 ಹಾಗೂ 49 ಗ್ರಾಹಕ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗಿರುತ್ತದೆ ಎಂದು ಕಾನೂನು ಮಾಪನಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕ ಹೆಚ್.ಎಸ್.ರಾಜು ತಿಳಿಸಿದ್ದಾರೆ.

ಸಂಚಾರಿ ನಿಯಮ ಪಾಲಿಸಿ: ಪ್ರೊ.ಎಮ್.ಎ.ಸಿದ್ಧಾಂತಿ

ಧಾರವಾಡ: ಯುವಕರು, ಕಾಲೇಜು ವಿದ್ಯಾರ್ಥಿಗಳು ಸಂಚಾರಿ ನಿಯಮಗಳನ್ನು ಪಾಲಿಸದೇ ಕರ್ಕಶವಾಗಿ ಶಬ್ದ ಹೊರಸೂಸುವ ಸೈಲೆನ್ಸರ್ ಪೈಪ್ ಅಳವಡಿಸಿಕೊಳ್ಳುವುದು, ಜೋರಾಗಿ ಓಡಿಸುವುದನ್ನು ಫ್ಯಾಶನ್ ರೀತಿಯಲ್ಲಿ ಮಾಡಿಕೊಂಡಿದ್ದಾರೆ. ಇದರಿಂದ ತಮ್ಮ ಜೀವಕ್ಕೆ ಅಪಾಯವಿದ್ದು ಟ್ರಾಫಿಕ್ ನಿಯಮ ಪಾಲಿಸಬೇಕು ಎಂದು ಕೆ.ಇ.ಬೋರ್ಡ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಮ್.ಎ.ಸಿದ್ಧಾಂತಿ ಅವರು ಹೇಳಿದರು.

ಭಾರತ ಸರಕಾರ ನೆಹರು ಯುವ ಕೇಂದ್ರ, ಹುಬ್ಬಳ್ಳಿ–ಧಾರವಾಡ ಪೊಲೀಸ್ ಕಮಿಷನರೇಟ್ ಸಂಚಾರ ಪೊಲೀಸ್ ಠಾಣೆ ಹಾಗೂ ಧಾರವಾಡದ ಅಗ್ನಿಶಾಮಕ ಇಲಾಖೆಗಳ ಸಹಯೋಗದಲ್ಲಿ ಕೆ.ಇ.ಬೋರ್ಡ ಕಾಲೇಜಿನ ಸಭಾಂಗಣದಲ್ಲಿ ಇಂದು ಬೆಳಿಗ್ಗೆ ಆಯೋಜಿಸಿದ್ದ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಾಹನ ಸಂಚಾರಕರು ಟ್ರಾಫಿಕ್ ನಿಯಮಗಳನ್ನು ಪಾಲಿಸುವುದರಿಂದ ತಮ್ಮ

ಜೀವದೊಂದಿಗೆ ಇತರರ ಜೀವಗಳನ್ನು ಕಾಪಾಡುತ್ತಾರೆ. ಪೊಲೀಸ್ ಇಲಾಖೆಯು ಸಂಚಾರಿ ನಿಯಮಗಳನ್ನು ಪಾಲಿಸದವರ ವಿರುದ್ಧ ಇನ್ನೂ ಕಠಿಣಕ್ರಮ ಕೈಗೊಳ್ಳಬೇಕು. ಕಾಲೇಜು ವಿದ್ಯಾರ್ಥಿಗಳು ಜಾಗೃತಿಯಿಂದ ಬೈಕ್, ಕಾರ್ ವಾಹನಗಳನ್ನು ಓಡಿಸಬೇಕೆಂದು ಅವರು ಹೇಳಿದರು.

ಧಾರವಾಡ ಟ್ರಾಫಿಕ್ ಎ.ಎಸ್.ಐ ವಿರೇಶ ಬಳ್ಳಾರಿ ಮಾತನಾಡಿ, ರಸ್ತೆ ಸುರಕ್ಷತಾ ವಿಚಾರದಲ

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವ: ಜಾನಪದ ಕಲಾಮೇಳಕ್ಕೆ ವಿದ್ಯುಕ್ತ ಚಾಲನೆ

ಬೈಲಹೊಂಗಲ: ಜಿಲ್ಲಾಡಳಿತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ಸಂಗೊಳ್ಳಿ ಗ್ರಾಮದಲ್ಲಿ ಬುಧವಾರ ನಡೆದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವ–2024 ಜಾನಪದ ಕಲಾಮೇಳಕ್ಕೆ ವಿದ್ಯುಕ್ತವಾಗಿ ಚಾಲನೆ ನೀಡಲಾಯಿತು.

ಶಾಸಕ ಮಹಾಂತೇಶ ಕೌಜಲಗಿ, ಗ್ರಾಪಂ ಅಧ್ಯಕ್ಷ ರೂಪಾ ಚಚಡಿ, ಉಪಾಧ್ಯಕ್ಷ ಫಕೀರಪ್ಪ ಕುರಿ, ಉಪವಿಭಾಗಾಧಿಕಾರಿ ಪ್ರಭಾವತಿ ಫಕೀರಪೂರ, ತಾಪಂ ಇಒ ಸುಭಾಷ ಸಂಪಗಾಂವಿ, ತಹಸೀಲ್ದಾರ ಸಚ್ಚಿದಾನಂದ ಕುಚನೂರ ಅನೇಕರು ಡೊಳ್ಳು ಬಾರಿಸುವ ಮೂಲಕ ಜಾನಪದ ಕಲಾ ಮೇಳದ ಭವ್ಯ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಗೆ ಭವ್ಯ ಸ್ವಾಗತ ಕೋರಿದ ಗ್ರಾಮಸ್ಥರು

ಮೆರವಣಿಗೆಯು ಗ್ರಾಮ ದ ಪ್ರಮುಖ ಬೀದಿಗಳಲ್ಲಿ ಸಂಚರಿಸುವಾಗ ಗ್ರಾಮಸ್ಥರು ಮನೆ ಅಂಗಳ ಮುಂದೆ ಬಣ್ಣಬಣ್ಣದ ರಂಗೋಲಿ ಚಿತ್ತಾರ, ತಳಿರು ತೋರಣಗಳಿಂದ ಶೃಂಗರಿಸಲಾಗಿತ್ತು. ಮೆರವಣಿಗೆಯಲ್ಲಿ ಪಾಲ್ಗೊಂಡ ಜನತೆಗೆ ಕಲಾಮೇಳ ತಂಡಗಳಿಗೆ ರಾಗಿ ಅಂಬಲಿ, ನೀರು ವಿತರಣೆ ಮಾಡಲಾಯಿತು. ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣ ವಾಗಿತ್ತು. ಡಿಜೆ ಸೌಂಡಗೆ ಯುವ ಪಡೆ ಹೆಜ್ಜೆ ಹಾಕಿ ಕುಣಿದು ಕುಪ್ಪಳಿಸಿದರು.

ಪ್ರಾಥಃ ಕಾಲ ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಅರ್ಚಕ ಬಸವರಾಜ ಡೊಳ್ಳಿನ ಪೂಜೆ ನೆರವೇರಿಸಿದರು. ನಂತರ ಗಣ್ಯರಿಂದ ನಂದಿ ಧ್ವಜ ನೆರವೇರಿಸಲಾಯಿತು. ಗುರುಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯವಹಿಸಿದ್ದರು.

ಕಣ್ಮನ ಸಳೆದ ಕಲಾತಂಡಗಳ ನೃತ್ಯ

ಸುರೇಬಾನ ಕವಿರತ್ನ ಕಾಳಿದಾಸ ಜಗ್ಗಲಗಿ ಮೇಳ, ರಾಮದುರ್ಗ ಶಾಖಾಬರಿ ಮಹಿಳಾ ಗೊಂಬೆ ಕುಣಿತ, ಕೊಣ್ಣೂರ ಬರಮಲಿಂಗೇಶ್ವರ ಮಹಿಳಾ ಡೊಳ್ಳು ಕುಣಿತ, ಗುಂಡೆನಟ್ಟಿ ಬಸವೇಶ್ವರ ಜಗ್ಗಲಗಿ ಮೇಳ, ಹಾಸನ ಸಣ್ಣ ಸ್ವಾಮಿ ಡೊಳ್ಳು ಕುಣಿತ, ದೇವಿರಮ್ಮ ತಂಡದ ಕಸಾಳೆ ನೃತ್ಯ, ಸಂಕನಕಟ್ಟಿ ಪರಮಾನಂದ ಕರಡಿಮಜಲು, ಅರಸೀಕೆರೆ ಜಯರಾಮ ತಂಡದ ನಂದಿಧ್ವಜ, ಕಲ್ಲೋಳಿ ಗೂಳಪ್ಪ ವಿಜಯ ನಗರ ತಂಡದ ವೀರಗಾಸೆ, ಕಲ್ಲೋಳಿ ಮಹಾಂತೇಶ ಹೂಗಾರ ತಂಡದ ಸನಾದಿ ಮೇಳ, ಹಲ್ಯಾಳ ಶಶಿಧರ ಭಜಂತ್ರಿ ತಂಡದ ತಾಸೆ ವಾದನ ಮತ್ತು ಸನಾದಿ ಮೇಳ, ತುಮಕೂರು ಬಾನುಪ್ರಕಾಶ ತಂಡದ ನೀಲು ಕುದುರೆ ಗೊಂಬೆ ಕುಣಿತ, ನಿಟ್ಟೂರ ಸಂಗಮೇಶ ತಂಡದ ನಂದಿಧ್ವಜ, ಕೊಣ್ಣೂರ ಬೀರಲಿಂಗೇಶ್ವರ ತಂಡದ ಡೊಳ್ಳು ಕುಣಿತ ನೋಡುಗರ ಗಮನ ಸೆಳೆದವು.

ಈ ಸಂದರ್ಭದಲ್ಲಿ ಸಾವಿರಾರು ನಾಗರೀಕರು ಇದ್ದರು.

ದೇಶಭಕ್ತಿ ಗೀತೆಗಳ ಸ್ಪರ್ಧೆ

ಬೆಳಗಾವಿ: ಇಲ್ಲಿಯ ಭರತೇಶ ಶಿಕ್ಷಣ ಸಂಸ್ಥೆಯ ಪ್ರತಿ ವರ್ಷದಂತೆ ಈ ವರ್ಷವೂ ವೈಯಕ್ತಿಕ ಹಾಗೂ ಸಾಮೂಹಿಕ ದೇಶ ಭಕ್ತಿ ಗೀತೆಗಳ ಗಾಯನ ಸ್ಪರ್ಧೆಯನ್ನು ಆಯೋಜಿಸಿದೆ. ಸ್ಪರ್ಧೆಯು ಎರಡು ಹಂತಗಳಲ್ಲಿ ನಡೆಯಲಿದ್ದು, ಮಂಗಳವಾರ ದಿ. 23/1/2024 ರಂದು 16 ವರ್ಷದ ಒಳಗಿನವರಿಗೆ ವೈಯಕ್ತಿಕ ಹಾಗೂ ಸಾಮೂಹಿಕ, ಬುಧವಾರ ದಿ. 24/1/2024 ರಂದು 16 ವರ್ಷ ಮೇಲ್ಪಟ್ಟವರಿಗೆ ವೈಯಕ್ತಿಕ ಹಾಗೂ ಸಾಮೂಹಿಕ ಸ್ಪರ್ಧೆಗಳನ್ನು ಇಡಲಾಗಿದೆ. ಸ್ಪರ್ಧೆಯಲ್ಲಿ ಬೇರೆ ಬೇರೆ ಭಾರತೀಯ ಭಾಷೆಯ ಎರಡು ಧೇಶಭಕ್ತಿ ಗೀತೆ ಹಾಡಬೇಕು.

ವಿಜೇತರಿಗೆ 25000 ರೂ ನಗದು ಹಾಗೂ ಆಕರ್ಷಕ ಟ್ರೋಫಿ ಕೊಡಲಾಗುವುದು, ಹೆಚ್ಚಿನ ಸಂಖ್ಯೆಯಲ್ಲಿ ಆಸಕ್ತ ವಿದ್ಯಾರ್ಥಿಗಳು, ಮಹಿಳಾ ಮಂಡಳದವರು ಹಾಗೂ ಸಾರ್ವಜನಿಕರು ಭಾಗವಹಿಸಬೇಕೆಂದು ಪ್ರಕಟಣೆಯಲ್ಲಿ ತಿಳಸಲಾಗಿದೆ.

ಹೆಚ್ಚಿನ ವಿವರಗಳಿಗಾಗಿ ಶ್ರೀಮತಿ ಜ್ಯೋತಿ ಮಿರಜಕರ(97317–97482, ಎಸ್. ಎನ್. ಅಕ್ಕಿ (95913–96090) ಎ. ಎ. ಸನದಿ (96861–27134) ಇವರನ್ನು ಸಂಪರ್ಕಿಸಬಹುದು.

ನಾಳೆ ಜಿಟಿಟಿಸಿ ಸಂಸ್ಥೆ; ಟಾಟಾ ಎಲೆಕ್ಟ್ರಾನಿಕ್ಸ್ ಕಂಪನಿ ವತಿಯಿಂದ ವಿಶೇಷ ಮಹಿಳಾ ನೇಮಕಾತಿ ಶಿಬಿರ

ಬೆಳಗಾವಿ: ಬೆಳಗಾವಿ ನಗರದ ಉದ್ಯಮಬಾಗದ ಖಾನಾಪುರ ರಸ್ತೆಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, (ಜಿಟಿಟಿಸಿ) ಇವರ ಸಂಯೋಗದಿಂದ ಟಾಟಾ ಎಲೆಕ್ಟ್ರಾನಿಕ್ಸ್ ಕಂಪನಿ ವತಿಯಿಂದ ಮೋಬೈಲ್ ಫೋನ್ ಜೋಡಣೆ ಮತ್ತು ಟೆಸ್ಟಿಂಗ್ ಕೆಲಸಗಳಿಗೆ ಜನೆವರಿ 19 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆ ಯವರೆಗೆ ವಿಶೇಷ ಮಹಿಳಾ ನೇಮಕಾತಿ ಶಿಬಿರ ಹಮ್ಮಿಕೊಳ್ಳಲಾಗಿದೆ.

ಶಿಬಿರದಲ್ಲಿ 10 ನೇ ತರಗತಿ ಮತ್ತು ಪಿಯುಸಿ ಪಾಸಾದ 18 ರಿಂದ 25 ವಯೋಮಿತಿ ಯೊಳಗಿನ ಮಹಿಳೆಯರ ಸಂದರ್ಶನ ನಡೆಯಲಿದೆ. ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಸ್ಥಳದಲ್ಲಿಯೇ ನೇಮಕಾತಿ ಪತ್ರ ನೀಡಲಾಗುವುದು.

ಉದ್ಯೋಗದ ಅವಧಿಯಲ್ಲಿ ಮಾಸಿಕ 12,000 ಸಾವಿರ ರೂ. ವೇತನ, ಕಂಪನಿ ವತಿಯಿಂದ ಊಟ ಮತ್ತು ವಸತಿ ವ್ಯವಸ್ಥೆ, ಆರೋಗ್ಯ ವಿಮೆ, ಭವಿಷ್ಯ ನಿಧಿ, ಹಾಗೂ ಸಾರಿಗೆ ಸೇರಿದಂತೆ ವಿವಿಧ ಸೌಲಭ್ಯ ನೀಡಲಿದೆ.

ಆಸಕ್ತರು ಹೆಸರು ನೋಂದಾಯಿಸಲು ಅಥವಾ ಹೆಚ್ಚಿನ ಮಾಹಿತಿಗೆ ಪ್ರಾಂಶುಪಾಲರು ಮೊ.ನಂ: 9141630309, 9739820219 ಸಂಪರ್ಕಿಸಬೇಕು ಎಂದು ಬೆಳಗಾವಿ ಜಿಟಿಟಿಸಿ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ಜಮಾಬಂದಿ ಕಾರ್ಯಕ್ರಮ

ಬೆಳಗಾವಿ: ಬೆಳಗಾವಿ ತಾಲೂಕಾ ಪಂಚಾಯತಿಯ 2022 –23 ನೇ ಸಾಲಿನ ಜಮಾಬಂದಿ ಕಾರ್ಯಕ್ರಮ ಬೆಳಗಾವಿ ತಾಲೂಕಾ ಪಂಚಾಯತ ಆಡಳಿತ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಶುಕ್ರವಾರ (ಜ.19) ರಂದು ಬೆಳಿಗ್ಗೆ 11 ಗಂಟೆಗೆ ತಾಲೂಕಾ ಪಂಚಾಯತ ಸಭಾಭವನದಲ್ಲಿ ನಡೆಯಲಿದೆ.

ಸದರಿ ಕಾರ್ಯಕ್ರಮಕ್ಕೆ ತಾಲೂಕಾ ಮಟ್ಟದ ಅಧಿಕಾರಿಗಳು ಹಾಗೊ ಪತ್ರಿಕಾ ಮಾಧ್ಯಮದವರು ಆಗಮಿಸಬೇಕು ಎಂದು ಬೆಳಗಾವಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

ವಿಕಲಚೇತನರ ರಿಯಾಯಿತಿ ಬಸ್ ಪಾಸ್

ಬೆಳಗಾವಿ: ಬೆಳಗಾವಿ 2023 ನೇ ಸಾಲಿನ ವಿಕಲಚೇತನರ ರಿಯಾಯಿತಿ ಬಸ್ ಪಾಸುಗಳನ್ನು ನವೀಕರಿಸಲು ಸೂಕ್ತ ವ್ಯವಸ್ಥೆ ಮಾಡಲಾಗಿರುತ್ತದೆ. 2023 ನೇ ಸಾಲಿನಲ್ಲಿ ಚಾಲ್ತಿ ಪಾಸು ಹೊಂದಿರುವ ಅರ್ಹ ವಿಕಲಚೇತನರ ರಿಯಾಯಿತಿ ದರದ ಪಾಸುಗಳನ್ನು ಬೆಳಗಾವಿ, ಬೈಲಹೊಂಗ, ಖಾನಾಪೂರ ಪಾಸ ಕೌಂಟರಗಳಲ್ಲಿ ಪಾಸುಗಳನ್ನು ಜ.12 2024 ರಿಂದ ಪೆ. 29 .2024 ರ ವರೆಗೆ ನವೀಕರಸಲಾಗಿದೆ.

2023 ನೇ ಸಾಲಿನ ಪಾಸುಗಳ ನವೀಕರಣ ಮತ್ತು ನೂತನ ಪಾಸುಗಳಿಗೆ 660 ರೂ ನಗದು ರೂಪದಲ್ಲಿ ಅಥವಾ ಡಿ.ಡಿ. ರೂಪದಲ್ಲಿ ಶುಲ್ಕವನ್ನು ಪಾವತಿಸಿ ವಿಕಲಚೇತನರ ಬಸ್ ಪಾಸ್ ಸವೀಕರಿಸಿಕೊಳ್ಳುವುದು. 2023 ರಲ್ಲಿ ವಿತರಿಸಿರುವ ಬಸ್ ಪಾಸ್‌ಗಳನ್ನು ಪೆ.29 2024 ವರೆಗೆ ಮಾಡಲಾಗುತ್ತದೆ.

ಸದರಿ ಅವಧಿಯ ಒಳಗಾಗಿ ಎಲ್ಲ ಫಲಾನುಭವಿಗಳು ತಮ್ಮ ಪಾಸುಗಳನ್ನು ನವೀಕರಿಸಿಕೊಳ್ಳಬಹುದು. ತದ ನಂತರ ಬಂದ ಪಾಸುಗಳನ್ನು ನವೀಕರಿಸಲಾಗುವುದಿಲ್ಲ.

ಸೇವಾ ಸಿಂಧುವಿನಲ್ಲಿ ಅರ್ಜಿಯನ್ನು ಸಲ್ಲಲಿಸಿದಲ್ಲಿ ಮಾತ್ರ ವಿಕಲಚೇತನರ ರಿಯಾಯತಿ ಬಸ್ ಪಾಸುಗಳನ್ನು ವಿತರಿಸಲಾಗುವುದು, ಅರ್ಜಿಗಳನ್ನು ವೇಬ್‌ಸೈಟ್-https://sevasindhu.karnataka.gov.in ನಲಿ ಲ್ ನಮೂದಿಸ ಬಹುದಾಗಿದೆ.

ವಿಕಲಚೇತನರಿಗೆ ರಿಯಾಯತಿ ಬಸ್ ಪಾಸ್ ಪಡೆಯಲು ದೊರವಾಣಿಯುಳ್ಳ ಆಧಾರ ಕಾರ್ಡ ಕಡ್ಡಾಯವಾಗಿರುತ್ತದೆ ತಪ್ಪಿದಲ್ಲಿ ಸೇವಾ ಸಿಂಧುವಿನಿಂದ ಒ.ಟಿ.ಪಿ ಬರುವುದಿಲ್ಲ ಒ.ಟಿ.ಪಿ ಬರದೆ ಇದ್ದಲ್ಲಿ ಪಾಸಿನ ಅರ್ಜಿಯನ್ನು ನಮೂದಿಸಲು ಸಾಧ್ಯವಾಗುವುದಿಲ್ಲ.

ಅದರಂತೆ 2024ನೇ ಸಾಲಿನಲ್ಲಿ ಅರ್ಹ ವಿಕಲಚೇತನರಿಗೆ ಹೊಸದಾಗಿ ಪಾಸುಗಳನ್ನು ಜ.12 2024 ರಿಂದ ವಿತರಿಸಲಾಗುತ್ತದೆ.ರಿಯಾಯತಿ ಬಸ್ ಪಾಸ್ ಪಡೆದುಕೊಳ್ಳಲು ವೈದ್ಯಕೀಯ ಪ್ರಮಾಣ ಪತ್ರ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಂದ ಧೃಡಿಕರಿಸಿದ ಗುರುತಿನ ಚೀಟಿ, ಅಥವಾ ಯು.ಡಿ.ಆಯ್.ಡಿ ಕಾರ್ಡ ನಕಲು ಪ್ರತಿ, ಆಧಾರ ಕಾರ್ಡ,ರೊ.20/– ಛಾಪಾ ಕಾಗದ ಮೇಲೆ ಸರಕಾರಿ ನೌಕರಿ/ ಅರೇ ಸರಕಾರಿ ನೌಕರಿ ಮಾಡುತ್ತಿಲ್ಲ. ಎಂಬ ದೃಡೀಕರಣ ಸಲ್ಲಿಸಬೇಕು.ಮೂರು ಇತ್ತಿಚಿನ ಭಾವಚಿತ್ರದಗಳೊಂದಿಗೆ ಮತ್ತು ಸದರಿ ದಾಖಲಾತಿಗಳನ್ನು ಸೇವಾ ಸಿಂಧುವಿನಲ್ಲಿ ಅರ್ಜಿಯನ್ನು ದಾಖಲಾಸಿದ ನಂತರ ವಿಭಾಗೀಯ ಕಛೇರಿ ಬೆಳಗಾವಿ ಇವರಲ್ಲಿ ಪ್ರತಿ ಬುಧವಾರ ಖುದ್ದಾಗಿ ಹಾಜರಾಗಿ ದಾಖಲೆಗಳನ್ನು ಸಲ್ಲಿಸಿ ಪಾಸ್ ಪಡೆಯಬಹುದಾಗಿರುತ್ತೆ. ತಮ್ಮ ವಾಸಸ್ಥಳದಿಂದ 100 ಕಿ.ಮೀ ಗರಿಷ್ಠ ಅಂತರದವರೆಗೆ ಸಂಸ್ಥೆಯ ವೇಗದೂತ ಮತ್ತು ಸಾಮಾನ್ಯ.ತಡೆರಹಿತ ಸಾರಿಗೆ ಬಸ್ಸುಗಳಲ್ಲಿ ಕರ್ನಾಟಕ ರಾಜ್ಯದೊಳಗೆ ಮಾತ್ರ ಪ್ರಯಾಣಿಸಲು ಅವಕಾಸ ವಿರುತ್ತದೆ. ಹೊಸದಾಗಿ ಪಾಸು ಪಡೆದುಕೊಳ್ಳಲು ಯಾವುದೆ ಕಾಲಮಿತಿ ಇರುವುದಿಲ್ಲ.ವಿಕಲಚೇತನರು ಈ ಸೌಲಭ್ಯದ ಸದುಪಯೋಗ ಪಡೆಯಬೇಕು ಎಂದು ಬೇಳಗಾವಿ ವಿಭಾಗ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪರಿಚಿತ ವ್ಯಕ್ತಿಯ ಮೃತ್ತದೇಹ ಪತ್ತೆ

ಬೆಳಗಾವಿ: ಚಿಂಚಲಿ ಹಾಗೂ ಕುಡಚಿ ರೈಲ್ವೆ ನಿಲ್ದಾಣದ ಮದ್ಯ ಜ.13 2024 ರಂದು ಅಪರಿಚಿತ ವ್ಯಕ್ತಿಯ ಮೃತದೇಹ ಪತ್ತೆಯಾಗಿರುತ್ತದೆ.

ಸದರಿ ವ್ಯಕ್ತಿಯ ವಯಸ್ಸು ಅಂದಾಜು 30 ರಿಂದ 35 ವರ್ಷವಿದ್ದು, ಎತ್ತರ 5,6 ಇಂಚ, ಕೆಂಪು ಮೈ ಬಣ್ಣ, ಸದೃಡ ಮೈಕಟು, ಉದ್ದು ಮುಖ, ಉದ್ದು ಮೂಗು, ಅರಿಶಿಣ ಬಣ್ಣದ ಜಾಕೆಟ, ಬಿಳಿ ಪಟ್ಟಿ ಫುಲ್ ಶರ್ಟ, ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್,ತಲೆಯಲ್ಲಿ ಕಪ್ಪು ಕೂದಲು ಇರುತ್ತದೆ.

ಈ ರೀತಿ ಚಹರೆಯುಳ್ಳ ಮೃತನ ರಕ್ತ ಸಂಬಂಧಿಗಳು ಯಾರಾದರೂ ಪತ್ತೆಯಾದರೆ ಬೆಳಗಾವಿ ರೈಲ್ವೆ ಪೋಲಿಸ್ ಠಾಣೆ ದೂರವಾಣಿ ಸಂಖ್ಯೆ: (0831) 2405273 ಪಿ.ಎಸ್.ಐ ಮೊಬೈಲ ನಂ:9480802127 ಅಥವಾ ರೈಲ್ವೆ ಪೊಲೀಸ್ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ. (080) 22871291 ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ರೈಲ್ವೆ ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ: ವೀರಕ್ತಮಠದ ಚನ್ನವೀರಸ್ವಾಮಿ

ಸವಣೂರು : ಸರ್ಕಾರದ ಯೋಜನೆಗಳನ್ನು ಸದುಪಯೋಗ ಪಡೆದುಕೊಂಡು ಗ್ರಾಮೀಣ ಪ್ರದೇಶದ ಮಹಿಳೆಯರು ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದು ಹೂವಿನಶಿಗ್ಲಿಯ ಶ್ರೀ ವೀರಕ್ತಮಠದ ಚನ್ನವೀರಸ್ವಾಮಿ ಹೇಳಿದರು.

ಇಲ್ಲಿನ ಮಠದ ಆವರಣದಲ್ಲಿ ತಾಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಹಾಗೂ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆಯ ಸಹಯೋಗದಲ್ಲಿ ಮಂಗಳವಾರ ಹಮ್ಮಿಕೊಂಡ ಕಾರ್ಯಕ್ರಮದ ಉದ್ಘಾಟಕರಾಗಿ ಮಾತನಾಡಿದರು.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆ (ಎನ್‌ಆರ್‌ಎಲ್‌ಎಂ) ಸಂಜೀವಿನಿ ಯೋಜನೆಯಡಿ ಆರ್ಥಿಕ ನೆರವು ಪಡೆದಿರುವ ಮಹಿಳಾ ಸ್ವಸಹಾಯ ಗುಂಪುಗಳು ತಯಾರಿಸಿರುವ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟಕ್ಕಾಗಿ ಈ ಸಂತೆಯನ್ನು ಆಯೋಜಿಸ ಲಾಗುತ್ತಿದೆ. ಎನ್‌ಆರ್‌ಎಲ್‌ಎಂ ಸಂಜೀವಿನಿ ಯೋಜನೆಯಡಿ ಆರ್ಥಿಕ

ಸೌಲಭ್ಯ ಪಡೆದಿರುವ ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರು ಮನೆಗಳಲ್ಲಿಯೇ ವಿವಿಧ ಉತ್ಪನ್ನಗಳನ್ನು ತಯಾರಿಸುತ್ತಿದ್ದಾರೆ.

ಈ ಉತ್ಪನ್ನಗಳಿಗೆ ಮಾರುಕಟ್ಟೆ ದೊರಕಿಸಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಉದ್ದೇಶದಿಂದ ಮಾಸಿಕ ಸಂತೆಯನ್ನು ಆಯೋಜನೆ ಮಾಡಲಾಗಿದೆ ಎಂದು ತಿಳಿಸಿದರು.

ಪ್ರಸ್ತಾವಿಕವಾಗಿ ವಲಯ ಮೇಲ್ವಿಚಾರಕ ಮಾಲತೇಶ ಮಟಿಗೇರ ಮಾತನಾಡಿ, ಗ್ರಾಮೀಣ ಭಾಗದ ಸ್ವಸಹಾಯ ಸಂಘಗಳಲ್ಲಿ ತೊಡಗಿಕೊಂಡಿರುವ ಮಹಿಳೆಯರು ತಯಾರಿಸಿರುವ ಉತ್ಪನ್ನಗಳನ್ನು ಮಾರಾಟ ಮಾಡಲು ವೇದಿಕೆ ಕಲ್ಪಿಸಿ, ಅವರು ಆರ್ಥಿಕವಾಗಿ ಅಭಿವೃದ್ಧಿ ಪಡಿಸಲು ಉತ್ತೇಜನ ನೀಡುವುದಕ್ಕಾಗಿ ಮಾಸಿಕ ಸಂತೆ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಲಕ್ಷ್ಮವ್ವ ಗಡ್ಡೆಣ್ಣವರ, ಒಕ್ಕೂಟದ ಅಧ್ಯಕ್ಷೆ ರೇಖಾ ನಿಂಬಣ್ಣವರ, ಕಾರ್ಯದರ್ಶಿ ಮುತ್ತವ್ವ ಚಪ್ಪರದ, ಖಜಾಂಶಿ ಮೈರುನಾ ಜಾಪರನ್ನವರ, ಗ್ರಾಪಂ.ಕಾರ್ಯದರ್ಶಿ ವಿರೇಶ ಕಮ್ಮಾರ್, ಗ್ರಾಪಂ.ಸದಸ್ಯರು ಉಪಸ್ಥಿತರಿದ್ದರು. ಎಂಬಿಕೆ ನಂದಾ ಇಮ್ರಾಪೂರ ಸ್ವಾಗತಿಸಿದರು. ಲಕ್ಷ್ಮವ್ವ ಕುರಿ ನಿರೂಪಿಸಿ, ವಂದಿಸಿದರು.

ಕಳ್ಳನ ಬಂಧನ; ಚಿನ್ನಾಭರಣ, ನಗದು ವಶ

ಕೆಂಭಾವಿ: ಹಲವು ಕಡೆಗಳಲ್ಲಿ ಮನೆಗಳ್ಳತನ ಮಾಡಿ ಸುಮಾರು 8 ತಿಂಗಳಿಂದ ತಲೆಮರೆಸಿಕೊಂಡಿದ್ದ ಕುಖ್ಯಾತ ಕಳ್ಳನನ್ನು ಬಂಧಿಸುವಲ್ಲಿ ಪೊಲೀಸ್ ಇಲಾಖೆ ಯಶಸ್ವಿಯಾಗಿದೆ.

ಬಂಧಿತ ಆರೋಪಿ ಅಣ್ಣಪ್ಪ ಉರ್ಫ ಅನೀಲ ತಂದೆ ಸಿದ್ದಪ್ಪ ಜೇರಟಗಿ ಸಾ: ಗೋಲಿಬಾರ್ ಮಡ್ಡಿ ಸಿಂದಗಿ ಎಂದು ಗುರುತಿಸಲಾಗಿದ್ದು, ಯಾದಗಿರಿ ಜಿಲ್ಲೆಯ ಕೆಂಭಾವಿ ಠಾಣಾ ವ್ಯಾಪ್ತಿಯ 6 ಮನೆಗಳ್ಳತನ ಸೇರಿದಂತೆ ಸುರಪುರ, ಕೊಡೆಕಲ್ ಹಾಗೂ ಗೋಗಿ ಠಾಣಾ ವ್ಯಾಪ್ತಿಯ ವಿವಿಧೆಡೆ ಸುಮಾರು ಹತ್ತು ಮನೆಗಳ್ಳತನ ಪ್ರಕರಣದಲ್ಲಿ ಭಾಗಿಯಾಗಿದ್ದ ಈತನ್ನು ಸಮೀಪದ ಚಾಮನಾಳ ಕ್ರಾಸ್ ಹತ್ತಿರ ಜ. 15 ರಂದು ಬಂಧಿಸಿ ವಿಚಾರಣೆಗೊಳಪಡಿಸಿದ ಪೋಲಿಸರು ಆರೋಪಿತ ನಿಂದ ಒಟ್ಟು 26 ತೊಲೆ ಬಂಗಾರದ ಆಭರಣಗಳು ಹಾಗೂ 1.78,000/– ರೂ ನಗದು ಹಣವನ್ನು ವಶಪಡಿಸಿಕೊಂಡು ಕ್ರಮ ಜರುಗಿಸಲಾಗಿದೆ ತಿಳಿಸಿದ್ದಾರೆ.

ಅಪರಾಧಿ ಪತ್ತೆ ಕಾರ್ಯ ತಂಡದಲ್ಲಿ ಹುಣಸಗಿ ಸಿಪಿಐ ಸಚಿನ್ ಚಲುವಾದಿ ನೇತೃತ್ವದಲ್ಲಿ ಕೆಂಭಾವಿ ಪಿ ಎಸ್ ಐ ರಾಜಶೇಖರ ರಾಠೋಡ್, ಕ್ರೈಮ್ ಪಿ.ಎಸ್.ಐ ವೆಂಕಣ್ಣ, ಎ.ಎಸ್.ಐ ರವರಾದ ಬಸನಗೌಡ, ಬಲರಾಮ ಹಾಗೂ ಮೋನಪ್ಪ , ಹೆಡ್ ಕಾನ್ಸಟೇಬಲ್ ಪರಮಾನಂದ, ಬಸವರಾಜ, ಬಾಬು, ಪಿ.ಸಿ ಹಣಮಂತ್ರಾಯ, ಆನಂದ, ಮಾಳಪ್ಪ, ವಿಜಯಾನಂದ ಸೇರಿದಂತೆ ಇತರರು ಇದ್ದರು. ಆರೋಪಿ ಪತ್ತೆಹಚ್ಚುವಲ್ಲಿ ಯಶಸ್ವಿಯಾದ ತಂಡದ ಕಾರ್ಯಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ. ಸಂಗೀತಾ ರವರು ಶ್ಲಾಘಿಸಿದ್ದಾರೆ.

ಉನ್ನತಿ ಟ್ರಸ್ಟ್ ದಿಂದ ಸ್ವಾವಲಂಬಿ ಭಾರತ ಅಭಿಯಾನ

ಬೆಳಗಾವಿ: ನಗರದ ಶಹಾಪುರ ದಲ್ಲಿರುವ ಉತ್ತರಾದಿಮಠದಲ್ಲಿ ಮಂಗಳವಾರ ಉನ್ನತಿ ಟ್ರಸ್ಟ್ ಆಯೋಜಿಸಿದ ಮಹಿಳೆಯರಿಗಾಗಿ ಸ್ವಾವಲಂಬಿ ಭಾರತ ಅಭಿಯಾನ ಕಾರ್ಯಕ್ರಮ ಜರುಗಿತು.

ಮಹಿಳೆಯರಲ್ಲಿ ಸ್ವಾವಲಂಬನೆಯ ಭಾವ ಜಾಗೃತಿ ಮೂಡಿಸುವ ಉದ್ದೇಶದಿಂದ ವಿವಿದ ಧಾನ್ಯಗಳಿಂದ ತಯಾರಿಸಿದ ಆಹಾರ ಪದಾರ್ಥಗಳ ಪ್ರದರ್ಶನ ಮಾಡಲಾಯಿತು. ಇದರಲ್ಲಿ 22 ಮಹಿಳೆಯರು ಬಾಗವಹಿಸಿ ಪ್ರಥಮ, ದ್ವಿತೀಯ, ತ್ರತಿಯ ಮತ್ತು ಸಮಾಧಾನಕರ ಬಹುಮಾನಗಳನ್ನು ಮುಡಿಗೇರಿಸಿಕೊಂಡರು.

ಮಹಿಳೆಯುರು ತಮ್ಮ ಸಾಮರ್ಥ್ಯದ ಮೂಲಕ ಸ್ವದೇಶ ಪದಾರ್ಥಗಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿಬೇಕು. ಸ್ವ–ಉದ್ಯೋಗದಿಂದ ನ